# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 27 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 01–08–2023 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 01 | Issue - 27 | Title- Code: KARKAN 28269 | Chitradurga | Date : 01-08-2023 Tuesday | Page: 4 | Price: Rs. 2-00



ಒಳ ಪುಟದ ಸುದ್ದಿಗಳು

2 ಸಮುದಾಯಗಳು ಒಗ್ಗಟ್ಟಾಗಿ : ಮುರುಘಾ ಶ್ರೀ

3 ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗೆ 34,293.69 ಕೋಟಿ ರೂ. ಅನುದಾನ

4 ಬಯಲು ಸೀಮೆ ಮಂಡಳಿಯಲ್ಲಿ ಮೂವರು ಸಸ್ಪೆಂಡ್


ಫಾಸ್ಟ್ ನ್ಯೂಸ್

## ಇಂದಿನಿಂದ ಫ್ರೀ ಗೃಹಜ್ಯೋತಿ




**ನಮ್ಮ ಜನ ವಾರ್ತೆ ಬೆಂಗಳೂರು :** ಇಂದಿನಿಂದ ಗೃಹಜ್ಯೋತಿ ಯೋಜನೆ ಅಧಿಕೃತವಾಗಿ ಆರಂಭವಾಗುತ್ತಿದ್ದು, ಜೂಲೈ ತಿಂಗಳ 200 ಯುನಿಟ್ ಫ್ರೀ ಬಿಲ್ ಬರಲಿದ್ದು, ಜನರು ಸಾಕಷ್ಟು ನಿರೀಕ್ಷೆಯಲ್ಲಿದ್ದಾರೆ.

ಕಾಂಗ್ರೇಸ್ ಸರ್ಕಾರದ ಐದು ಸ್ಕೀಮ್ ಗಳ ಬಗ್ಗೆ ಶಕ್ತಿಯೋಜನೆ ಹಾಗೂ ಅನ್ನ ಭಾಗ್ಯ ಯೋಜನೆಯ ಉಪಯೋಗವನ್ನ ಜನರು ಈಗಾಗಲೇ ಪಡೆದುಕೊಳ್ಳುತ್ತಿದ್ದಾರೆ. ಇದೀಗ ಗೃಹಜ್ಯೋತಿಯು ಸಹ ಆಗಸ್ಟ್ ಒಂದರಿಂದ ಅಧಿಕೃತವಾಗಿ ಆರಂಭವಾಗುತ್ತಿದೆ, ಜುಲೈ ತಿಂಗಳ ಬಿಲ್ ಆಗಸ್ಟ್ ತಿಂಗಳಲ್ಲಿ ಬರಲಿದ್ದು, 200 ಯುನಿಟ್ ಬಳಸಿದ ಜನರಿಗೆ ಶೂನ್ಯ (0) ಬಿಲ್ ಬರಲಿದೆ.

ಸದ್ಯ ಜುಲೈ 25 ರವರೆಗೆ ಅರ್ಜಿ ಸಲ್ಲಿಕೆ ಮಾಡಿರುವ ಫಲಾನುಭವಿಗಳಿಗೆ ಮಾತ್ರ ಆಗಸ್ಟ್ ತಿಂಗಳಲ್ಲಿ ಗೃಹಜ್ಯೋತಿಯ ಉಚಿತ ವಿದ್ಯುತ್ ಸಿಗಲಿದ್ದು, 25 ರ ನಂತರ ಅರ್ಜಿ ಸಲ್ಲಿಸಿರುವ ಫಲಾನುಭವಿಗಳಿಗೆ ಸೆಪ್ಟೆಂಬರ್ ತಿಂಗಳಲ್ಲಿ ಸಿಗಲಿದೆ. ಸಧ್ಯ ಗೃಹಜ್ಯೋತಿಗೆ 1,18,50, 474 ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದು, ಎರಡುವರೆ ಕೋಟಿ ಫಲಾನಿಭವಿಗಳ ಪೈಕಿ ಶೇ.60 ರಷ್ಟು ಮಾತ್ರ ಜನರು ಅರ್ಜಿ ಸಲ್ಲಿಸಿದ್ದಾರೆ. ಇನ್ನು ಶೇ.40 ಜನರು ಅರ್ಜಿ ಸಲ್ಲಿಸುವುದು ಬಾಕಿ ಇದೆ.

ಇನ್ನೂ, ಅರ್ಜಿ ಸಲ್ಲಿಸೋಕೆ ಸಾಕಷ್ಟು ಜನರೇನೋ ಮುಂದೆ ಬರ್ತಿದ್ದಾರೆ. ಆದ್ರೆ ಸಾಕಷ್ಟ ಟೆಕ್ನಿಕಲ್ ಸಮಸ್ಯೆಗಳು ಎದುರಾಗುತ್ತಿದ್ದು, ಅರ್ಜಿ ಸಲ್ಲಿಸಲು ಬಂದಂತಹ ಫಲಾನುಭವಿಗಳು ರೋಸಿ ಹೋಗುತ್ತಿದ್ದಾರೆ.

**ಗೃಹಜ್ಯೋತಿ ಅರ್ಜಿಸಲ್ಲಿಕೆ ಆಗುತ್ತಿರುವ ಸಮಸ್ಯೆಗಳೇನು ?**

ಇಷ್ಟು ಸಮಸ್ಯೆಗಳು ಕಂಡುಬರುತ್ತಿರುವ ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಕೆ ನಿಧಾನವಾಗುತ್ತಿದೆ. ಈ ಅರ್ಜಿ ಸಲ್ಲಿಕೆಯ ವಿರುದ್ಧ ಒಂದಷ್ಟು ಆಕ್ರೋಶ ವ್ಯಕ್ತಪಡಿಸುತ್ತಿದ್ರೆ, ಮತ್ತೊಂದೆಡೆ ಆಗಸ್ಟ್ ತಿಂಗಳಿಂದ ಫ್ರೀ ಯುನಿಟ್ ಸಿಗತ್ತೆ ಅಂತ ಜನರು ಸಂತೋಷ ವ್ಯಕ್ತಪಡಿಸುತ್ತಿದ್ದಾರೆ.

# ಗೃಹಲಕ್ಷ್ಮೀ ಯೋಜನೆ ನೋಂದಣಿ : ಜಿಲ್ಲೆಯಲ್ಲಿ ಶೇ. 70 ರಷ್ಟು ಪ್ರಗತಿ

## ಪ್ರತಿ ನೋಂದಣಿ ಕೇಂದ್ರಕ್ಕೆ 100 ಗುರಿ, । ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿ–ಆಧಾರ್ ಇ–ಕೆವೈಸಿ



**ನಮ್ಮ ಜನ ವಾರ್ತೆ ಚಿತ್ರದುರ್ಗ :** ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆ ನೋಂದಣಿಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಅತ್ಯುತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ. ಪಡಿತರ ಚೀಟಿ ಹೊಂದಿದ ಶೇ.70 ರಷ್ಟು ಮನೆ ಒಡತಿಯರು ಯೋಜನೆ ಲಾಭ ಪಡೆಯಲು ಇದುವರೆಗೂ ಅರ್ಜಿ ಸಲ್ಲಿಸಿದ್ದಾರೆ. ಉಳಿದ ಅರ್ಜಿ ಸಲ್ಲಿಕೆಗಳ ಪ್ರಕ್ರಿಯೆ ಚುರುಕುಗೊಳಿಸಿ, ಮೂರನಾಲ್ಕು ದಿನಗಳಲ್ಲಿ ಪೂರ್ಣಗೊಸುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಕುರಿತು ಸೋಮವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ತಾಲೂಕುಗಳ ತಹಶೀಲ್ದಾರು, ತಾ.ಪಂ.ಇಓ, ನಗರ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಡಿಪಿಓಗಳ ಸಭೆ ನಡೆಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶಗಳಿಂತ, ನಗರ ಪ್ರದೇಶದಲ್ಲಿ ಹೆಚ್ಚಿನ ನೋಂದಣಿ ಪ್ರಮಾಣ ಕಂಡುಬಂದಿದೆ. ನೋಂದಣಿಗೆ ಅಡಚಣೆ ಉಂಟು ಮಾಡುವ ತಾಂತ್ರಿಕ ತೊಂದರೆಗಳಿಗೆ ಪರಿಹಾರ ಕಂಡುಕೊಳ್ಳಲು ಎಲ್ಲಾ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕರ್ತವ್ಯ ನಿರ್ವಹಿಸಬೇಕು. ಪ್ರತಿ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಕರ್ನಾಟಕ ಒನ್ ಕೇಂದ್ರಗಳು ದಿನ ಒಂದ–ಕ್ಕೆ 100 ನೋಂದಣಿಗಳನ್ನು ಕಡ್ಡಾಯವಾಗಿ ಮಾಡಬೇಕು. ಮುಖ್ಯವಾಗಿ ಸಿಡಿಪಿಓಗಳು, ಗ್ರಾಮ, ವಾರ್ಡ್‌ವಾರು ಪಡಿತರ ಚೀಟಿ ಹೊಂದಿರುವವರ ಪಟ್ಟಿ ತಯಾರಿಸಿ, ನೋಂದಣಿ ಕೇಂದ್ರಗಳಿಗೆ ಕರೆ ತರಬೇಕು ಎಂದರು.

**ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿ–ಆಧಾರ್ ಇ–ಕೆವೈಸಿ :** ಬಹಳಷ್ಟು ಅರ್ಜಿಗಳು ಪಡಿತರ ಚೀಟಿಯೊಂದಿಗೆ ಆಧಾರ್ ಇ–ಕೆವೈಸಿ ಆಗಿರದ ಕಾರಣ ನೊಂದಣಿಯಾಗುತ್ತಿಲ್ಲ. ಪಡಿತರ ಚೀಟಿಯೊಂದಿಗೆ ಆಧಾರ್ ಇ–ಕೆವೈಸಿ ಮಾಡಲು ಸಂಬಂದ ಪಟ್ಟ ನ್ಯಾಯಬೆಲೆ ಅಂಗಡಿಗಳಲ್ಲಿ ಸೌಲಭ್ಯವಿದೆ. ಸಾರ್ವಜನಿಕರು ತಾಲೂಕು ಕೇಂದ್ರ ಅಥವಾ ತಾಲೂಕು ಕಚೇರಿಗಳಿಗೆ ಅಲೆದಾಡದೆ, ಸಂಬಂದ ಪಟ್ಟ ನ್ಯಾಯಬೆಲೆ ಅಂಗಡಿಗಳಿಗೆ ತೆರಳಿ, ಆಧಾರ್ ನಂಬರ್ ನೀಡುವುದರೊಂದಿಗೆ, ಬಯೋಮೆಟ್ರಿಕ್ ಮೂಲಕ ಇ–ಕೆವೈಸಿ ಮಾಡಿಸಿಕೊಳ್ಳವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ತಿಳಿಸಿದ್ದಾರೆ.

ಇನ್ನೂ ಪಡಿತರ ಚೀಟಿಯಲ್ಲಿ ಕುಟುಂಬದ ಮುಖ್ಯಸ್ಥರ ವಿವರದಲ್ಲಿ, ಪುರಷರ ಹೆಸರಿನಿಂದ ಮಹಿಳೆಯರ ಹೆಸರಿಗೆ ಬದಲಾಯಿಸಲು ಅವಕಾಶವಿದೆ. ಆಹಾರ ಶಿರಸ್ತೇದಾರ್ ಅವರಿಗೆ ಅರ್ಜಿ ಸಲ್ಲಿಸುವುದರ ಮೂಲಕ ಕುಟುಂಬದ ಮುಖ್ಯಸ್ಥರ ವಿವರವನ್ನು ಬದಲಾಯಿಸಿಕೊಳ್ಳಬಹುದು.

ಎಲ್ಲಾ ತಹಶೀಲ್ದಾರ್ ಕಚೇರಿಗಳಲ್ಲಿ ಆಧಾರ್ ಸೇವಾ ಕೇಂದ್ರಗಳಿವೆ. ಯಾರ ಆಧಾರ್ ಸಂಖ್ಯೆ ಮೊಬೈಲ್ ನಂಬರ್ ಜೋಡಣೆಯಾಗಿಲ್ಲವೋ ಅವರು ಕೂಡಲೇ ಮೊಬೈಲ್ ನಂಬರ್ ಜೋಡಣೆ ಮಾಡಿಸಬಹುದು. ಜಿ.ಎಸ್.ಟಿ ಹಾಗೂ ಆದಾಯ ತೆರಿಗೆ ಸಲ್ಲಿಸದ ಇರುವ ಎಪಿಎಲ್ ಪಡಿತರ ಚೀಟಿ ಹೊಂದಿರುವವರು ಗೃಹಲಕ್ಷ್ಮೀ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದರು.

**ನೋಂದಣಿ ಕುಂಠಿತ ಸಿಡಿಪಿಓಗಳೇ ಹೊಣೆ :**

ಗೃಹಲಕ್ಷ್ಮೀ ಯೋಜನೆ ನೋಂದಣಿ ಕುರಿತು ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಬರುವ ಗುರುವಾರ ಪ್ರಗತಿ ಪರಿಶೀಲನೆ ಸಭೆ ನಡೆಯಲಿದೆ. ಅದರ ಒಳಗಾಗಿ ನೋಂದಣಿ ಪ್ರಕ್ರಿಯೆ ಚುರುಕುಗೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಯೋಜನೆ ಅನುಷ್ಠಾನ ಗೊಳಿಸಲಾಗುತ್ತಿದೆ. ಈ ಕಾರ್ಯಕ್ಕೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿಗಳು ಕೈ ಜೋಡಿಸಿ ಸಹಕರಿಸುತ್ತಿವೆ. ಸಿಡಿಪಿಓಗಳು ನೋಂದಣಿ ಕುರಿತು ಹೆಚ್ಚಿನ ಜಾಗೃತಿ ವಹಿಸಬೇಕು. ಪ್ರತಿ ವಾರ್ಡ್ ಹಾಗೂ ಗ್ರಾಮವಾರು ಮಾಹಿತಿಯನ್ನು ಪಡೆದುಕೊಳ್ಳಬೇಕು. ನೋಂದಣಿ ಮಾಡಿಸಲು ಜನರನ್ನು ಪ್ರೇರಿಪಿಸಬೇಕು. ನೋಂದಣಿ ಕುಂಠಿತ ಕಂಡುಬಂದರೆ ಸಂಬಂದಪಟ್ಟ ಸಿಡಿಪಿಓಗಳನ್ನೇ ನೇರವಾಗಿ ಹೊಣೆ ಮಾಡಲಾಗುವುದು. ಅಂತಹವರ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ಪ್ರತಿ ನೋಂದಣಿ ಕೇಂದ್ರಗಳಲ್ಲಿ ಕನಿಷ್ಠ 100 ನೋಂದಣಿಯನ್ನು ಪ್ರತಿದಿನ ಮಾಡಲೇ ಬೇಕು ಎಂದು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 3,90,204 ಪಡಿತರ ಚೀಟಿ ಹೊಂದಿರುವ ಕುಟುಂಬಗಳು ಇವೆ. ಇದರಲ್ಲಿ ಜುಲೈ 30ರ ಅಂತ್ಯ–ಕ್ಕೆ 2,73,291 ಕುಟುಂಬದ ಒಡತಿಯರು ಗೃಹಲಕ್ಷ್ಮೀ ಯೋಜನೆ ಈಗಾಗಲೇ ನೊಂದಾಯಿಸಿಕೊಂಡಿದ್ದಾರೆ. ಜಿಲ್ಲೆಯಲ್ಲಿ ಶೇ.70.4 ರಷ್ಟು ಪ್ರಗತಿ ಸಾಧಿಸಲಾಗಿದೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ.ಆರ್. ಬಣಕಾರ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಗೃಹಲಕ್ಷ್ಮಿ ಯೋಜನೆಗೆ ಶಾಸಕ ಚಾಲನೆ



ಚಳ್ಳಕೆರೆ ನಗರದ ತ್ಯಾಗರಾಜ ನಗರದಲ್ಲಿರುವ ಕರ್ನಾಟಕ ಒನ್ ಕೇಂದ್ರದಲ್ಲಿ ಸರ್ಕಾರದ ಗೃಹಲಕ್ಷ್ಮಿ ಯೋಜನೆಯ ಆದೇಶ ಪ್ರತಿಯನ್ನು ಶಾಸಕ ಟಿ.ರಘುಮೂರ್ತಿ ವಿತರಿಸಿದರು.

**ಚಳ್ಳಕೆರೆ :** ರಾಜ್ಯದ ಜನತೆಗೆ ಕಾಂಗ್ರೆಸ್ ಪಕ್ಷ ನೀಡಿದ ಭರವಸೆಯನ್ನು ಪೂರ್ಣಮಟ್ಟದಲ್ಲಿ ಈಡೇರಿಸುವ ಜವಾಬ್ದಾರಿ ಸರ್ಕಾರದ್ದಾಗಿದ್ದು, ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಈಗಾಗಲೇ ಹಲವಾರು ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯದ ಜನತೆಯ ವಿಶ್ವಾಸವನ್ನು ಗಳಿಸಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ತ್ಯಾಗರಾಜ ನಗರದಲ್ಲಿರುವ ಕರ್ನಾಟಕ ಒನ್ ಕೇಂದ್ರದಲ್ಲಿ ಸರ್ಕಾರದ ಮಹತ್ತರ ಯೋಜನೆಯಾದ ಗೃಹಲಕ್ಷ್ಮಿ ಯೋಜನೆಯ ಆದೇಶ ಪ್ರತಿ ವಿತರಿಸಿ ಮಾತನಾಡಿದರು. ರಾಜ್ಯದಲ್ಲಿಯೇ ಎಲ್ಲಾ ಕೇಂದ್ರಗಳಲ್ಲಿ ಮಹಿಳೆಯರು ಸ್ವ–ಯಂ ಪ್ರೇರಣೆಯಿಂದ ಆಗಮಿಸಿ ಯೋಜನೆಯ ಪ್ರಯೋಜನವನ್ನು ಪಡೆದುಕೊಳ್ಳಲು ಮುಂದಾಗಿದ್ದಾರೆ. ಕಳೆದ ಜೂನ್11ರಿಂದ ಮಹಿಳೆಯರಿಗೆ ಉಚಿತ ಬಸ್ ವ್ಯವಸ್ಥೆಯನ್ನು ಸರ್ಕಾರ ಕಲ್ಪಿಸಿದೆ, ಗೃಹಜ್ಯೋತಿ ಯೋಜನೆ ಪ್ರಗತಿಯಲ್ಲಿದೆ, ಅನ್ನಭಾಗ್ಯ ಯೋಜನೆಯ ಅಕ್ಕಿಯ ಜೊತೆಗೆ ಹಣವನ್ನೂ ಸಹ ಪಾವತಿ ಮಾಡಲಾಗುತ್ತಿದೆ. ರಾಜ್ಯದ ಜನತೆ ಹೆಚ್ಚು ನೆಮ್ಮದಿ ವಿಶ್ವಾಸ, ಸಂತೋಷದಿಂದ ಬದುಕುವ ಕಾಲವಾಗಿದೆ. ಕಾಂಗ್ರೆಸ್ ಪಕ್ಷದ ಈ ಕೊಡುಗೆ ಸಮಾಜದ ಎಲ್ಲಾ ವರ್ಗದ ಜನರಿಗೆ ತೃಪ್ತಿ ತಂದಿದೆ ಎಂದರು.

ಪೌರಾಯುಕ್ತೆ ಟಿ.ಲೀಲಾವತಿ, ಕಾಂಗ್ರೆಸ್ ಮುಖಂಡ ರಾಮಪ್ಪ, ಕರ್ನಾಟಕ ಒನ್ ಸೆಂಟರ್ ಪ್ರತಿನಿಧಿ ಸಿ.ಪುರುಷೋತ್ತಮ, ಸರಸ್ವತಿ ಮುಂತಾದವರು ಉಪಸ್ಥಿತರಿದ್ದರು.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಕೊರೊನಾ ಹಗರಣದ ಬಗ್ಗೆ ತನಿಖೆ ನಡೆಸುವುದು ನಿಶ್ಚಿತ

**ಬೆಂಗಳೂರು** : ಬಿಜೆಪಿ ಅವಧಿಯ ಕೊರೊನಾ ಹಗರಣಗಳ ಬಗ್ಗೆ ತನಿಖೆ ನಡೆಸುತ್ತೇವೆ. ಕೊರೊನಾ ಹಗರಣವನ್ನು ನ್ಯಾಯಾಂಗ ತನಿಖೆಗೆ ವಹಿಸುವ ಚಿಂತನೆ ಇದೆ. ನ್ಯಾಯಾಂಗ ತನಿಖೆ ವಿಚಾರವನ್ನು ಸಿಎಂ ಮುಂದೆ ಪ್ರಸ್ತಾಪಿಸಿದ್ದೇವೆ. ಸಾರ್ವಜನಿಕರ ಹಣ ದುರುಪಯೋಗದ ಬಗ್ಗೆ ವರದಿ ಬಂದಿದೆ. ಕೊರೊನಾ ಹಗರಣದ ಬಗ್ಗೆ ತನಿಖೆ ನಡೆಸುವುದು ನಿಶ್ಚಿತ ಎಂದು ಬೆಂಗಳೂರಿನಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

### ಕಾಂಗ್ರೆಸ್ ನಾಯಕರು ಭಯೋತ್ಪಾದಕರನ್ನು ರಕ್ಷಣೆ ಮಾಡುತ್ತಿದ್ದಾರೆ : ಶೋಭಾ ಕರಂದ್ಲಾಜೆ

ನವದೆಹಲಿ: ಕಾಂಗ್ರೆಸ್ ನಾಯಕರು ಭಯೋತ್ಪಾದಕರನ್ನು ರಕ್ಷಣೆ ಮಾಡ್ತಿದ್ದಾರೆ. ಕರ್ನಾಟಕ ರಾಜ್ಯ ಭಯೋತ್ಪಾದಕರಿಗೆ ಅಡಗುತಾಣವಾಗುತ್ತಿದೆ. ಕಾಂಗ್ರೆಸ್ ಸರ್ಕಾರದ ಓಲೈಕೆ ರಾಜಕಾರಣವೇ ಇದಕ್ಕೆಲ್ಲ ಕಾರಣ. ಕಾರಾಗೃಹಗಳಲ್ಲಿ ಭಯೋತ್ಪಾದನ ಚಟುವಟಿಕೆಗಳು ನಡೆಯುತ್ತಿವೆ. ಯುವಕರು ಐಸಿಎಸ್ ಸೇರಿ ಬೇರೆ ಸಂಘಟನೆಗಳ ಜತೆ ಸಂಪರ್ಕ ಹೊಂದುತ್ತಿದ್ದಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಾಗ್ದಾಳಿ ಮಾಡಿದರು.

### ರಾಜ್ಯದಲ್ಲಿ ಹಚ್ಚುತ್ತಿರು ಮದ್ರಾಸ್ ಐ ಹಿನ್ನಲೆ ಮಾರ್ಗಸೂಚಿ ಹೊರಡಿಸಿದ ಆರೋಗ್ಯ ಇಲಾಖೆ

ಬೆಂಗಳೂರು: ರಾಜ್ಯದಲ್ಲಿ ಹಚ್ಚುತ್ತಿರು ಮದ್ರಾಸ್ ಐ ಹಿನ್ನಲೆ ಆರೋಗ್ಯ ಇಲಾಖೆ ಮಾರ್ಗಸೂಚಿ ಹಾಗೂ ಸಲಹೆ ನೀಡಿದೆ.

**ಮದ್ರಾಸ್ ಐ ನಾ ರೋಗ ಲಕ್ಷಣಗಳು :**

ಕಣ್ಣು ಕೆಂಪಾಗುವುದು, ನೀರು ಸೋರುವಿಕೆ
ಅತಿಯಾದ ಕಣ್ಣೀರು
ಕಣ್ಣಿನಲ್ಲಿ ತುರಿಕೆ
ಸತತ ಕಣ್ಣು ನೋವು ಮತ್ತು ಚುಚ್ಚುವಿಕೆ
ಬೆಳಕನ್ನು ನೋಡಲು ಸಾಧ್ಯವಾಗದೇ ಇರುವುದು
ದೃಷ್ಟಿ ಮಂಜಾಗುವುದು
ಕಣ್ಣಿನ ಎರಡು ರೆಪ್ಪೆಗಳು ಕೀವು ಮಿಶ್ರಿತದಿಂದ ಕೂಡಿರುವುದು

### ಶಕ್ತಿ ಯೋಜನೆ ವಿರೋಧಿಸಿ ಹುಬ್ಬಳ್ಳಿಯಲ್ಲಿ ಆಟೋ ಚಾಲಕರ ಪ್ರತಿಭಟನೆ

**ಹುಬ್ಬಳ್ಳಿ** : ಶಕ್ತಿ ಯೋಜನೆ ವಿರೋಧಿಸಿ ಹುಬ್ಬಳ್ಳಿಯ ಚೆನ್ನಮ್ಮ ವೃತ್ತದಲ್ಲಿ ಆಟೋ ಚಾಲಕರು ಪ್ರತಿಭಟನೆ ಮಾಡುತ್ತಿದ್ದಾರೆ. ನೂರಾರು ಆಟೋ ಚಾಲಕರು, ಮಾಲೀಕರು ಪ್ರತಿಭಟನೆ ಮಾಡುತ್ತಿದ್ದು, ಶಕ್ತಿ ಯೋಜನೆಯನ್ನು ರದ್ದು ಮಾಡಿ, ನಮ್ಮನ್ನ ರಕ್ಷಿಸಿ ಎಂದು ಆಗ್ರಹಿಸಿದ್ದಾರೆ. ಸಿದ್ದರಾಮಯ್ಯನವರ ಸರ್ಕಾರದ ವಿರುದ್ಧ ಘೋ?ಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆ ಹುಬ್ಬಳ್ಳಿ-ಧಾರವಾಡ ಅವಳಿ ನಗರದಲ್ಲಿ ಆಟೋ ಸಂಚಾರ ಸಂಪೂರ್ಣ ಬಂದ್ ಆಗಿದೆ.

### ಚಿಕ್ಕಮಗಳೂರಲ್ಲಿ ಗಗನಕ್ಕೇರಿದ ಟೊಮೆಟೋ ಬೆಲೆ

**ಚಿಕ್ಕಮಗಳೂರು** : ಕಾಫಿನಾಡಿನಲ್ಲಿ ಟೊಮೇಟೊ ಬೆಲೆ ಗಗನಕ್ಕೇರಿದ್ದು, 200 ರೂ. ಗಡಿ ತಲುಪಿದೆ. 26 ಕೆ.ಜಿ ಟೊಮೇಟೊ ಐದು ಸಾವಿರ ರೂಪಾಯಿಗೆ ಹರಾಜಾಗಿದೆ. ಉತ್ತರ ಭಾರತದ ರಾಜ್ಯಗಳಲ್ಲಿ ಚಿಕ್ಕಮಗಳೂರು ಟೊಮೇಟೊಗೆ ಭಾರಿ ಡಿಮ್ಯಾಂಡ್ ಹಿನ್ನೆಲೆ ಬೆಲೆ ಏರಿಕೆಯಾಗಿದೆ.

### ದ್ವಿತೀಯ ಪಿಯು ಪೂರಕ ಪರೀಕ್ಷೆ-2 ನೋಂದಣಿ ಆರಂಭ

**ಚಿತ್ರದುರ್ಗ** : 2022-23ನೇ ಸಾಲಿನ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ-2 ನೋಂದಣಿ ಪ್ರಕ್ರಿಯೆ ಆರಂಭವಾಗಿದೆ.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಪರೀಕ್ಷೆಗಳನ್ನು ನಡೆಸಲಾಗುವುದು. 2022-23ನೇ ಸಾಲಿನಲ್ಲಿ ಹಾಗೂ ಅದಕ್ಕಿಂತ ಹಿಂದಿನ ಸಾಲುಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾತ್ರ ಈ ಪರೀಕ್ಷೆಗೆ ನೋಂದಾಯಿಸಲು ಅರ್ಹರಾಗಿರುತ್ತಾರೆ.

ಈ ಪರೀಕ್ಷೆಯಲ್ಲಿ ಫಲಿತಾಂಶ ತಿರಸ್ಕರಿಸಲು ಅವಕಾಶ ಇರುವುದಿಲ್ಲ. ಪರೀಕ್ಷೆ ಸಂಬಂಧಿಸಿದ ಸುತ್ತೋಲೆ ಹಾಗೂ ವೇಳಾಪಟ್ಟಿಯನ್ನು ಮಂಡಳಿಯ ಜಾಲತಾಣ **http://kseab.karnataka.gov.in** ನಲ್ಲಿ ಪ್ರಕಟಿಸಲಾಗಿದೆ. ಈ ಅವಕಾಶವನ್ನು ಅರ್ಹ ವಿದ್ಯಾರ್ಥಿಗಳು ಉಪಯೋಗಿಸಿಕೊಳ್ಳಬೇಕು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎನ್.ರಾಜು ತಿಳಿಸಿದ್ದಾರೆ.

# ಸಣ್ಣ ಸಣ್ಣ ಸಮುದಾಯಗಳು ಒಗ್ಗಟ್ಟಾಗಿ ಹೋರಾಡಿದರೆ ಸಾಮಾಜಿಕ ನ್ಯಾಯ ಪಡೆಯಲು ಸಾಧ್ಯ : ಮುರುಘಾ ಶ್ರೀ



ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಸಾಂಸ್ಕೃತಿಕ ಕಲೋತ್ಸವ ಉದ್ಘಾಟಿಸಿ ಬಸವಪ್ರಭು ಸ್ವಾಮೀಜಿ ಮಾತನಾಡಿದರು.

**ಚಿತ್ರದುರ್ಗ** : ಸಣ್ಣ ಸಣ್ಣ ಸಮುದಾಯಗಳು ಒಗ್ಗಟ್ಟಾಗಿ ಏಕಾಗ್ರತೆಯಿಂದ ಹೋರಾಡಿದಾಗ ಮಾತ್ರ ಸಾಮಾಜಿಕ ನ್ಯಾಯ ಪಡೆಯಲು ಸಾಧ್ಯ ಎಂದು ಮುರುಘಾಮಠದ ಬಸವಪ್ರಭು ಸ್ವಾಮೀಜಿ ಕರೆ ನೀಡಿದರು.

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಹಿಂದುಳಿದ ವರ್ಗಗಳ ಪ್ರವರ್ಗ-1 ಜನಾಂಗಗಳ ಒಕ್ಕೂಟದಿಂದ ಇಲ್ಲಿನ ಕ್ರೀಡಾ ಭವನದಲ್ಲಿ ಭಾನುವಾರ ಏರ್ಪಡಿಸಲಾಗಿದ್ದ ಜಿಲ್ಲಾ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಜಿಲ್ಲಾ ಮಟ್ಟದ ಶಿಕ್ಷಣ, ಸಾಹಿತ್ಯ, ಸಾಂಸ್ಕೃತಿಕ ಕಲೋತ್ಸವ ಉದ್ಘಾಟಿಸಿ ಮಾತನಾಡಿದರು.

ದೊಡ್ಡ ದೊಡ್ಡ ಸಮುದಾಯದವರು ಒಂದಾಗಿ ಹೋರಾಡಿದ್ದರಿಂದ ಮುಂಚೂಣಿಗೆ ಬಂದಿದ್ದಾರೆ. ಸಣ್ಣ ಸಮಾಜ ಒಂದಾಗದಿದ್ದರೆ ಕಷ್ಟವಾಗುತ್ತದೆ. ಒಂದೊಂದು ಸಮುದಾಯದವರಲ್ಲಿ ಒಂದೊಂದು ಪ್ರತಿಭೆ ಕಲೆಯಿದೆ. ಅಲೆಮಾರಿ ಮತ್ತು ಅರೆಅಲೆಮಾರಿಗಳು ಸಂಘಟಿತರಾಗದಿದ್ದರೆ ಸಮುದಾಯ ಉಳಿಯುವುದಿಲ್ಲ. ಹಲವು ಜಾತಿ ಧರ್ಮ, ಜನಾಂಗ ಸೇರಿ ಭಾರತವಾಗಿದೆ. ಆಧುನಿಕ ಜಾಗತೀಕರಣ ಯುಗದಲ್ಲಿ ಸವಾಲು ನಿಮ್ಮ ಮುಂದಿದೆ ಎನ್ನುವುದನ್ನು ಗಮನದಲ್ಲಿಟ್ಟುಕೊಂಡು ಹೋರಾಟ ನಡೆಸಿದಾಗ ಮಾತ್ರ ಸರ್ಕಾರದಿಂದ ಸಿಗುವ ಸೌಲತ್ತುಗಳನ್ನು ಪಡೆದುಕೊಳ್ಳಬಹುದೆಂದು ಹೇಳಿದರು.

ಅಲೆಮಾರಿ, ಅರೆಅಲೆಮಾರಿ ಜನಾಂಗದವರು ತಮ್ಮ ಕುಲಕಸುಬನ್ನೆ ನೆಚ್ಚಿಕೊಂಡು ಊರು ಊರು ತಿರುಗುವ ಬದಲು ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡುವುದರ ಕಡೆ ಹೆಚ್ಚಿನ ಗಮನ ಕೊಡಿ ಆಗ ನಿಮಗೆ ಸಿಗಬೇಕಾದ ಸಾಮಾಜಿಕ ನ್ಯಾಯ, ಸ್ವಾತಂತ್ರ್ಯ ಎಲ್ಲವೂ ದೊರಕುತ್ತದೆ. ಮೊದಲಿನಿಂದಲೂ ನಮ್ಮ ಮಠ ನಿಮ್ಮ ಬೆಂಬಲಕ್ಕಿದೆ. ಈಗಲೂ ಸದಾ ನಿಮ್ಮ ಜೊತೆ ಇರುತ್ತೇವೆಂದು ಬಸವಪ್ರಭು ಸ್ವಾಮೀಜಿ ಭರವಸೆ ನೀಡಿದರು.

ಅಲೆಮಾರಿ ಮತ್ತು ಅರೆಅಲೆಮಾರಿ ನಿಗಮದ ಮಾಜಿ ಅಧ್ಯಕ್ಷ ಕೆ.ರವೀಂದ್ರಶೆಟ್ಟಿ ಉಳಿದೊಟ್ಟು ಮಾತನಾಡಿ ಒಂದು ವರ್ಷ ಏಳು ತಿಂಗಳು ನಾನು ನಿಗಮದ ಅಧ್ಯಕ್ಷನಾಗಿದ್ದಾಗ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸುತ್ತಾಡಿ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರು ಅನುಭವಿಸುತ್ತಿರುವ ನೋವು, ಸಂಕಟ, ಸಮಸ್ಯೆಗಳನ್ನು ಕಂಡಿದ್ದೇನೆ, ಹಾಗಾಗಿ ಧ್ವನಿ ಇಲ್ಲದವರ ಜೊತೆ ನಿಲ್ಲಲು ತೀರ್ಮಾನಿಸಿದ್ದೇನೆ. ರಾಜ್ಯದಲ್ಲಿ ಶೇ.5 ರಷ್ಟು ಅಲೆಮಾರಿ ಮತ್ತು ಅರೆಅಲೆಮಾರಿಗಳು ಮಾತ್ರ ಸ್ವಲ್ಪ ಸ್ಥಿತಿವಂತರಾಗಿದ್ದಾರೆ. ಉಳಿದ ಶೇ.95 ರಷ್ಟು ಜನಾಂಗ ಪ್ರಾಣಿಗಳಿಗಿಂತಲೂ ಕಡೆಯಾಗಿ ಟೆಂಟ್, ಡೇರೆ ಹಾಕಿಕೊಂಡು ಬಯಲಲ್ಲಿ ಚಳಿ, ಮಳೆ, ಗಾಳಿಯನ್ನು ಲೆಕ್ಕಿಸದೆ ಜೀವಿಸುತ್ತಿದ್ದಾರೆಂದು ಮರುಗಿದರು.

ಹಿಂದುಳಿದ ವರ್ಗಗಳ ಪ್ರವರ್ಗ-1 ಜನಾಂಗಗಳ ಒಕ್ಕೂಟದಲ್ಲಿ ನಲವತ್ತಾರು ಜಾತಿಗಳು ಬರುತ್ತವೆ. ಎಲ್ಲರನ್ನು ಒಗ್ಗಟ್ಟಾಗಿ ತೆಗೆದುಕೊಂಡು ಹೋದರೆ ಮಾತ್ರ ಸರ್ಕಾರ ತಿರುಗಿ ನೋಡುತ್ತದೆ. ಜಿಲ್ಲೆಯಲ್ಲಿ ಅಲೆಮಾರಿಗಳನ್ನು ಸಂಘಟಿಸಿ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕೆಂಬುದು ನನ್ನ ಆಸೆ. ಅದಕ್ಕಾಗಿ ಅಲೆಮಾರಿ ಮತ್ತು ಅರೆಅಲೆಮಾರಿಗಳ ಜೀವನ ಎನ್ನುವ 92 ಪುಟಗಳ ಪುಸ್ತಕವನ್ನು ಹೊರತಂದಿದ್ದೇನೆ. ಎಲ್ಲಾ ವರ್ಗಕ್ಕೆ ಸಾಮಾಜಿಕ ನ್ಯಾಯ ಸಿಗಬೇಕೆಂಬ ಉದ್ದೇಶ ನನ್ನದು ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಮೀಸೆ ಮಹಾಲಿಂಗಪ್ಪ ಮಾತನಾಡಿ ಅಲೆಮಾರಿ ಮತ್ತು ಅರೆಅಲೆಮಾರಿಗಳಿಗೆ ಮೂಲಭೂತ ಸೌಲಭ್ಯಕ್ಕಾಗಿ ಕಳೆದ 30-40 ವರ್ಷಗಳಿಂದಲೂ ಹೋರಾಟ ಮಾಡಿಕೊಂಡು ಬರುತ್ತಿದ್ದರೂ ಇನ್ನು ನಿರೀಕ್ಷೆಗೆ ತಕ್ಕಂತೆ ಸೌಲಭ್ಯಗಳು ಸಿಕ್ಕಿಲ್ಲ. ಐ.ಎ.ಎಸ್.ಅಧಿಕಾರಿ ಶಾಲಿನಿ ರಜನೀಶ್‌ರವರ ಬಳಿ ಹೋಗಿ ಮನವಿ ಮಾಡಿಕೊಂಡಾಗ ಒಂದು ಹಾಸ್ಟೆಲ್ ಚಿತ್ರದುರ್ಗಕ್ಕೆ ಮಂಜೂರಾಯಿತು. ನಂತರ ಕೋರ್ಟ್‌ಗೆ ಹೋಗಿದ್ದರ ಫಲವಾಗಿ ಎರಡು ಹಾಸ್ಟೆಲ್‌ಗಳಾಗಿವೆ. ಒಟ್ಟಾರೆ ಚಿತ್ರದುರ್ಗದಲ್ಲಿ ಮೂರು ಹಾಸ್ಟೆಲ್‌ಗಳಿವೆ. ಹೋರಾಟದಿಂದ ಮಾತ್ರ ಇನ್ನು ಹೆಚ್ಚಿನ ಸೌಲತ್ತುಗಳನ್ನು ಪಡೆಯಬಹುದು. ಅದಕ್ಕಾಗಿ ಅಲೆಮಾರಿ ಮತ್ತು ಅರೆಅಲೆಮಾರಿಗಳು ಸಂಘಟಿತರಾಗ ಬೇಕೆಂದು ವಿನಂತಿಸಿದರು.

ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡಿ 1928 ರಲ್ಲಿ ಸೈಮನ್ ಕಮೀಷನ್ ಭಾರತಕ್ಕೆ ಆಗಮಿಸಿ ದಲಿತರು, ಶೋಷಿತರು, ಅಲ್ಪಸಂಖ್ಯಾತರು, ದುರ್ಬಲ ವರ್ಗದವರ ಸ್ಥಿತಿಯನ್ನು ಅಧ್ಯಯನ ಮಾಡಲು ಮುಂದಾದಾಗ ಗಾಂಧಿ ಕಾಂಗ್ರೆಸ್‌ನವರು ತಿರಸ್ಕರಿಸಿದರು. ಆಗ ಎಲ್ಲರೂ ಗಾಂಧಿ ಪರವಾಗಿ ನಿಂತರು. 1938 ರಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ದುಂಡು ಮೇಜಿನ ಸಭೆಯಲ್ಲಿ ಪಾಲ್ಗೊಂಡು ದಲಿತರು, ಅಸ್ಪೃಶ್ಯರು, ಶೋಷಿತರು, ಅಲ್ಪಸಂಖ್ಯಾತರಿಗೆ ನ್ಯಾಯ ಒದಗಿಸಬೇಕೆಂಬ ವಾದ ಮಂಡಿಸಿದರು. ಅಲ್ಲಿಂದ ಇಲ್ಲಿಯತನಕ ಹಿಂದುಳಿದ ವರ್ಗಗಳ ಜನಾಂಗ ಅದರಲ್ಲಿಯೂ ಅಲೆಮಾರಿ ಮತ್ತು ಅರೆಅಲೆಮಾರಿಗಳು ತಮ್ಮ ಹಕ್ಕುಗಳಿಗಾಗಿ ಹೋರಾಟ ನಡೆಸಿಕೊಂಡು ಬರುತ್ತಲೆ ಇದ್ದಾರೆ. ಇನ್ನಾದರೂ ಜಾಗೃತರಾಗಿ ಒಗ್ಗಟ್ಟಾಗಬೇಕಿದೆ ಎಂದು ಹೇಳಿದರು.

ಬಸವ ರಮಾನಂದ ಮಹಾಸ್ವಾಮೀಜಿ, ಯೋಗಿ ಸಾಗರನಾಥ್ ಮಹಾರಾಜ್ ಸ್ವಾಮೀಜಿ, ಕರುಣಾಕರ ಸ್ವಾಮೀಜಿ ಇವರುಗಳು ಸಾನಿಧ್ಯ ವಹಿಸಿದ್ದರು.

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗಳ ಒಕ್ಕೂಟದ ಅಧ್ಯಕ್ಷ ತುಕಾರಾಮ ನಾಗಪ್ಪ ವಾಷರ ಅಧ್ಯಕ್ಷತೆ ವಹಿಸಿದ್ದರು,

ಮಾಜಿ ಶಾಸಕ ಹೆಚ್.ಎಸ್.ಶಿವಶಂಕರ್, ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗಗಳ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಓ.ಪ್ರತಾಪ್‌ಜೋಗಿ, ಕರ್ನಾಟಕ ಲೋಕಾಯುಕ್ತ ವಿಶ್ರಾಂತ ನ್ಯಾಯಾಧೀಶ ಸಿ.ಸೆಲ್ವಕುಮಾರ್, ಇಂದಿರಾ ಗುರುಸ್ವಾಮಿ ಇನ್ನು ಅನೇಕರು ವೇದಿಕೆಯಲ್ಲಿದ್ದರು.

ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳು ಹಾಗೂ ವಿವಿಧ ರಂಗಗಳಲ್ಲಿ ಸಾಧನೆ ಮಾಡಿರುವ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರನ್ನು ಗುರುತಿಸಿ ಸನ್ಮಾನಿಸಲಾಯಿತು.



ಕ್ರೀಡಾಭವನದಲ್ಲಿ ನಡೆದ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಸಾಂಸ್ಕೃತಿಕ ಕಲೋತ್ಸವದಲ್ಲಿ ಪ್ರತಿಭಾವಂತ ಸಾಧಕರನ್ನು ಸನ್ಮಾನಿಸಲಾಯಿತು.

# ಟಿ.ಕಾಲ್ಕೆರೆ ಚಂದ್ರಪ್ಪನವರಿಗೆ ನುಡಿನಮನ

ಚಿತ್ರದುರ್ಗ : ಎಲ್ಲಾ ಬಗೆಯ ಸಾಹಿತ್ಯ, ರೂಪಕಗಳಿಗೆ ರಾಗ ಸಂಯೋಜನೆ ಮಾಡುವ ದೊಡ್ಡ ತಾಕತ್ತು ಹೊಂದಿದ್ದ ಶಿಕ್ಷಕ ಟಿ.ಕಾಲ್ಕೆರೆ ಚಂದ್ರಪ್ಪ ಇಷ್ಟು ಬೇಗನೆ ನಮ್ಮನ್ನೆಲ್ಲಾ ಅಗಲುತ್ತಾರೆಂದು ಯಾರು ಊಹಿಸಿರಲಿಲ್ಲ ಎಂದು ರಂಗ ನಿರ್ದೇಶಕ ಹಾಗೂ ನಿವೃತ್ತ ಪ್ರಾಚಾರ್ಯರಾದ ಡಾ. ವಿ. ಬಸವರಾಜ್ ದುಃಖ ತೋಡಿಕೊಂಡರು.

ಜಿಲ್ಲಾ ಕಲಾವಿದರ ಒಕ್ಕೂಟದಿಂದ ಪತ್ರಕರ್ತರ ಭವನದಲ್ಲಿ ಶಿಕ್ಷಕ ಟಿ.ಕಾಲ್ಕೆರೆ ಚಂದ್ರಪ್ಪನವರಿಗೆ ಭಾನುವಾರ ಹಮ್ಮಿಕೊಳ್ಳಲಾಗಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಂತರಾಳದ ನುಡಿಗಳನ್ನು ಹಂಚಿಕೊಂಡರು.

ಶಿಕ್ಷಕ ವೃತ್ತಿಯ ಜೊತೆ ಸಂಗೀತ ಹಾಗೂ ಜಾನಪದ ಕ್ಷೇತ್ರಕ್ಕೆ ದೊಡ್ಡ ಶಕ್ತಿಯಾಗಿದ್ದ ಟಿ.ಕಾಲ್ಕೆರೆ ಚಂದ್ರಪ್ಪ ಬಾನಂದೂರು ಕೆಂಪಯ್ಯ, ಸಿ.ಅಶ್ವಥ್‌ರವರಷ್ಟೆ ಚೆನ್ನಾಗಿ ಹಾಡಿ ಎಲ್ಲರನ್ನು ತಲೆದೂಗಿಸುತ್ತಿದ್ದರು. ಸಾಂಸ್ಕೃತಿಕ ಲೋಕದ ದ್ರುವತಾರೆಯಂತಿದ್ದ ಟಿ.ಚಂದ್ರಪ್ಪ ಕಂಜರ ಬಡಿದುಕೊಂಡು ಹಾಡುತ್ತಿದ್ದರೆ ಮೈ ರೋಮಾಂಚನವಾಗುತ್ತಿತ್ತು. ವಿಧಿ ಕ-ರೆದಾಗ ಎಲ್ಲರೂ ಒಂದಲ್ಲ ಒಂದು ದಿನ ಹೋಗಲೇಬೇಕು ಎಂದು ನೋವಿನಿಂದ ನುಡಿದರು.

ಜಾನಪದ ಮತ್ತು ಸಾಂಸ್ಕೃತಿಕ ಲೋಕ-ಕ್ಕೆ ದೊಡ್ಡ ಆಸ್ತಿಯಾಗಿದ್ದ ಟಿ.ಕಾಲ್ಕೆರೆ ಚಂದ್ರಪ್ಪನಿಗೆ ಅನೇಕ ಅವಕಾಶಗಳು ಸಿಗಬೇಕಿತ್ತು. ಚಂದ್ರೋದಯ ಕಲಾ ಮತ್ತು ಸಾಂಸ್ಕೃತಿಕ ಸಂಘ ಕಟ್ಟಿಕೊಂಡಿದ್ದ ಅವರ ನೆನಪಿಗಾಗಿ ಪ್ರತಿ ವರ್ಷವೂ ಗಾಯನದಲ್ಲಿ ಸಾಧನೆ ಮಾಡುತ್ತಿರುವವರನ್ನು ಗುರುತಿಸಿ ಸನ್ಮಾನಿಸಬೇಕೆಂದು ಮೃತರ ಕುಟುಂಬದವರಲ್ಲಿ ಡಾ.ವಿ.ಬಸವರಾಜ್ ಮನವಿ ಮಾಡಿದರು.



ಜಾನಪದ ಹಾಡುಗಾರ ಶಿಕ್ಷಕ ಟಿ.ಚಂದ್ರಪ್ಪ ಕಾಲ್ಕೆರೆಗೆ ಪತ್ರಕರ್ತರ ಭವನದಲ್ಲಿ ನುಡಿನಮನ

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್ ಮಾತನಾಡಿ ಸಂಬಂಧವೆಂದರೆ ಕೇವಲ ರಕ್ತಸಂಬಂಧವಷ್ಟೆ ಅಲ್ಲ. ಹೃದಯಕ್ಕೆ ಯಾರು ಹತ್ತಿರವಾಗಿರುತ್ತಾರೋ ಅಂತಹವರು ಸಂಬಂಧಿಕರಿಗಿಂತ ಹೆಚ್ಚು. ಈ ನಿಟ್ಟಿನಲ್ಲಿ ಜಾನಪದ ಹಾಡುಗಾರ ಶಿಕ್ಷಕ ಟಿ.ಕಾಲ್ಕೆರೆ ಚಂದ್ರಪ್ಪ ತಮ್ಮ ಕಂಚಿನ ಕಂಠದ ಮೂಲಕ ಎಲ್ಲರ ಹೃದಯಕ್ಕೂ ಹತ್ತಿರದವರಾಗಿದ್ದರು ಎಂದು ಸ್ಮರಿಸಿದರು.

ನಾಡಗೀತೆ, ರಾಷ್ಟ್ರಗೀತೆ, ಜಾನಪದ ಹಾಡುಗಳನ್ನು ಸುಶ್ರಾವ್ಯವಾಗಿ ಹಾಡಿ ಜಾನಪದ ಲೋಕಕ್ಕೆ ತನ್ನದೆ ಆದೆ ಕೊಡುಗೆ ನೀಡಿದ್ದ ಶಿಕ್ಷಕ ಟಿ.ಕಾಲ್ಕೆರೆ ಚಂದ್ರಪ್ಪನವರ ಅಗಲಿಕೆ ಎಲ್ಲರಿಗೂ ದುಃಖ ತಂದಿದೆ. ನೂತನವಾಗಿ ರಚಿಸಿಕೊಂಡಿರುವ ಜಿಲ್ಲಾ ಕಲಾವಿದರ ಒಕ್ಕೂಟವನ್ನು ಮುನ್ನಡೆಸಿಕೊಂಡು ಹೋಗಬೇಕಾಗಿರುವುದರಿಂದ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದ ಕೆ.ಎಂ.ವೀರೇಶ್ ಸ್ಥಳದಲ್ಲಿಯೇ ಐದು ಸಾವಿರ ರೂ.ಗಳ ನೆರವನ್ನು ಘೋಷಿಸಿ ಇನ್ನು ದೊಡ್ಡ ಮಟ್ಟದಲ್ಲಿ ಬೆಳೆಸಿ ಇದರಿಂದ ಸಂಗ್ರಹವಾಗುವ ಹಣವನ್ನು ಕಲಾವಿದರ ಕಷ್ಟ, ಸಮಸ್ಯೆಗಳಿಗೆ ಬಳಸಬೇಕು. ಆಗ ಕಲಾವಿದರನ್ನು ಪ್ರೋತ್ಸಾಹಿಸಿದಂತಾಗುತ್ತದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಶಿಕ್ಷಣ ಇಲಾಖೆ ನಿವೃತ್ತ ನಿರ್ದೇಶಕ ಡಾ.ಎಂ.ಮಲ್ಲಣ್ಣ, ನಿವೃತ್ತ ಪ್ರಾಚಾರ್ಯ ಪ್ರೊ.ಎ.ವಿ.ನುಂಕಪ್ಪ, ಸಾಮಾಜಿಕ ಹೋರಾಟಗಾರ ಆರ್.ಶೇಷಣ್ಣಕುಮಾರ್, ಚಲನಚಿತ್ರ ನಿರ್ದೇಶಕ ಜಿ.ಶ್ರೀನಿವಾಸ್‌ಮೂರ್ತಿ, ವಕೀಲರ ಸಂಘದ ಮಾಜಿ ಅಧ್ಯಕ್ಷರುಗಳಾದ ಸಿ.ಶಿವುಯಾದವ್, ಎಸ್.ವಿಜಯಕುಮಾರ್, ಆಯಿತೋಳು ವಿರುಪಾಕ್ಷಪ್ಪ, ಕಾಲ್ಕೆರೆ ಚಂದ್ರಪ್ಪನವರ ಪತ್ನಿ ಇನ್ನು ಅನೇಕರು ವೇದಿಕೆಯಲ್ಲಿದ್ದರು.

ಜಾನಪದ ಹಾಡುಗಾರರಾದ ಹರೀಶ್, ಜಿ.ಓ.ಮುರಾರ್ಜಿ, ಶ್ರೀಮತಿ ತ್ರಿವೇಣಿ ತಂಡದವರು ಜಾನಪದ ಹಾಡುಗಳನ್ನು ಹಾಡಿ ಶಿಕ್ಷಕ ಟಿ.ಚಂದ್ರಪ್ಪ ಕಾಲ್ಕೆರೆಗೆ ನುಡಿನಮನ ಸಲ್ಲಿಸಿದರು.

ಪೊಲೀಸ್ ಮನು, ಶ್ರೀನಿವಾಸ್ ಮಳಲಿ, ದಾದಾಪೀರ್, ಉದಯರಾವ್, ಕಣಿವೆಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಜಯಣ್ಣ, ಚಂದ್ರಪ್ಪ ಸೇರಿದಂತೆ ಟಿ.ಕಾಲ್ಕೆರೆ ಚಂದ್ರಪ್ಪನವರ ಅಪಾರ ಅಭಿಮಾನಿಗಳು ನುಡಿನಮನದಲ್ಲಿ ಪಾಲ್ಗೊಂಡು ಆತ್ಮಕ್ಕೆ ಶಾಂತಿ ಕೋರಿದರು.

## ಫಾಸ್ಟ್ ನ್ಯೂಸ್

### ಆಗಸ್ಟ್ 1 ರಂದು ವ್ಯಸನಮುಕ್ತ ದಿನಾಚರಣೆ

**ದಾವಣಗೆರೆ :** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 1 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ; ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ.

### ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50% ರಿಯಾಯಿತಿ

**ದಾವಣಗೆರೆ :** 2023 ಸಾಲಿನ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಆಗಸ್ಟ್ ತಿಂಗಳ ಮಾಹೆಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ 50%ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು.

ಸಾಹಿತ್ಯ ಕೃತಿಗಳ ಸುಮಾರು 704 ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದ್ದು, ಅತ್ಯಂತ ಮೌಲಿಕವಾದ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಹೊಂದಿದೆ. ಆಸಕ್ತರು ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆ, ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ರಿಯಾಯಿತಿ ಸೌಲಭ್ಯ ಪಡೆದುಕೊಳ್ಳಬಹುದು. ಅಲ್ಲದೆ ಕನ್ನಡ ಪುಸ್ತಕ ಪ್ರಾಧಿಕಾರದ ಆನ್‌ಲೈನ್ ವೆಬ್‌ಸೈಟ್ **www.kannadapustakapradhikara.com** ಮೂಲಕ ಪುಸ್ತಕಗಳನ್ನು ಖರೀದಿಸಬಹುದು ಎಂದು ಆಡಳಿತಾಧಿಕಾರಿ ಕೆ.ಬಿ ಕಿರಣ್ ಸಿಂಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೂಡಾ ಅಧ್ಯಕ್ಷರಾಗಿ ಜಿಲ್ಲಾಧಿಕಾರಿ

**ದಾವಣಗೆರೆ :** ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಜುಲೈ 26 ರಂದು ಪೂರ್ವಾಹ್ನ ದಾವಣಗೆರೆ ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಅಧಿಕಾರ ವಹಿಸಿಕೊಂಡಿರುತ್ತಾರೆ.
ಅವರಿಗೆ ಸಂಬಂಧಿಸಿದ ಹಾಗೂ ವೈಯಕ್ತಿಕ ಗಮನ ಸೆಳೆಯಬಯಸಬಹುದಾದ ವಿಷಯಗಳನ್ನು ಅರೆ ಸರ್ಕಾರಿ ಪತ್ರದ ಮೂಲಕ ಜಿಲ್ಲಾಧಿಕಾರಿ ಹಾಗೂ ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಡಾ.ವೆಂಕಟೇಶ್.ಎಂ.ವಿ ಡಿ.ದೇವರಾಜು ಅರಸು ಬಡಾವಣೆ, ದಾವಣಗೆರೆ–577006 ದೂ.ಸಂ: 08192–259394 ಸಂಪರ್ಕಿಸಬಹುದೆಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

### ಪಾಲಿಕೆಯ ನಾಲ್ಕು ಸ್ಥಾಯಿ ಸಮಿತಿ ಸದಸ್ಯರ ಚುನಾವಣೆ

**ದಾವಣಗೆರೆ :** ಆಗಸ್ಟ್ 11 ರಂದು ಮ. 3 ಗಂಟೆಗೆ ಮಹಾನಗರ ಪಾಲಿಕೆ ಕೌನ್ಸಿಲ್ ಸಭಾಂಗಣದಲ್ಲಿ ನಾಲ್ಕು ಸ್ಥಾಯಿ ಸಮಿತಿ ಸದಸ್ಯರುಗಳನ್ನು ಆಯ್ಕೆ ಮಾಡಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾಸ್ ಇವರ ಅಧ್ಯಕ್ಷತೆಯಲ್ಲಿ ಸಭೆ ಕರೆಯಲಾಗಿದೆ.

# ಮಾನವ ಕಳ್ಳ ಸಾಗಾಣೆ ತಡೆಯಲು ಅಧಿಕಾರಿಗಳು ಸರ್ಕಾರದ ಕಣ್ಣು, ಕಿವಿಯಾಗಬೇಕು

**ನಮ್ಮ ಜನ ವಾರ್ತೆ ದಾವಣಗೆರೆ :** ಮಹಿಳಾ ಮತ್ತು ಮಕ್ಕಳ ಕಳ್ಳ ಸಾಗಾಣೆ ತಡೆಗಟ್ಟಲು ಅಧಿಕಾರಿಗಳು ಸರ್ಕಾರದ ಕಣ್ಣು, ಕಿವಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಎಂ.ವಿ ಹೇಳಿದರು.

ಸೋಮವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಜರುಗಿದ ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ಜಾಗೃತಿ ಮೂಡಿಸುವ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾನವ ಕಳ್ಳ ಸಾಗಾಣಿಕೆ ಎಂಬುದು ಅನಾದಿಕಾಲದಿಂದಲೂ ನಡೆದುಕೊಂಡು ಬಂದಿದೆ. ಅದರಲ್ಲೂ ಇದಕ್ಕೆ ಮಹಿಳೆಯರು ಮತ್ತು ಮಕ್ಕಳು ಹೆಚ್ಚಾಗಿ ಬಲಿಯಾಗುತ್ತಿದ್ದಾರೆ. ಇದು ಕೇವಲ ರಾಜ್ಯ ಮತ್ತು ರಾಷ್ಟ್ರದ ಸಮಸ್ಯೆಯಾಗಿರದೇ ಇಡೀ ವಿಶ್ವದ ಸಮಸ್ಯೆಯಾಗಿದೆ. ಆದ್ದರಿಂದ ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ಸರ್ಕಾರದಡಿ ಅನೇಕ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ, ಸ್ವಾಧಾರ ಕೇಂದ್ರಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕಣ್ಗಾವಲು ಸಮಿತಿಯನ್ನು ರಚಿಸಲಾಗಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರಾದ ಶ್ರೀಮತಿ ರಾಜೇಶ್ವರಿ ಎನ್. ಹೆಗಡೆ ಮಾತನಾಡಿ 2013 ರಲ್ಲಿ ವಿಶ್ವ ಸಂಸ್ಥೆಯಲ್ಲಿ ಜೂನ್ 30 ರಂದು ಮಾನವ ಕಳ್ಳ ಸಾಗಾಣಿಕೆ ತಡೆ ದಿನವನ್ನಾಗಿ ಆಚರಿಸುವಂತೆ ಕರೆ ನೀಡಿತು.

ರಾಜ್ಯದ ಕಳೆದ 5 ವರ್ಷಗಳಲ್ಲಿ ಕಳೆದು ಹೋದ ಬಾಲಕ ಬಾಲಕಿಯರಲ್ಲಿ 21,187 ಮಕ್ಕಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೋಲೀಸ್ ಇಲಾಖೆ , ಕಾನೂನು ಸೇವಾ ಪ್ರಾಧಿಕಾರ ಹಾಗೂ ಇತರ ಇಲಾಖೆಗಳ ಸಹಯೋಗದೊಂದಿಗೆ ರಕ್ಷಿಸಲಾಗಿದೆ.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಅರುಣ್. ಕೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಮಹಾವೀರ್.ಎಂ. ಕರೆಣ್ಣವರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಾಗರಾಜ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ರಾಮಾನಾಯ್ಕ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅರುಣ್‌ಕುಮಾರ್.ಎಲ್.ಹೆಚ್, ಮಹಿಳಾ ಮತ್ತು ಮಕ್ಕಳ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ಉಪಸ್ಥಿತರಿದ್ದರು.

# ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗೆ 34,293.69 ಕೋಟಿ ರೂ. ಅನುದಾನ

**ನಮ್ಮ ಜನ ವಾರ್ತೆ ಬೆಂಗಳೂರು :** ಈ ಸಾಲಿನಲ್ಲಿ ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗೆ 34,293.69 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ವಿಧಾನಸೌಧದಲ್ಲಿಂದು ನಡೆದ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಎಸ್‌ಸಿಪಿ ಮತ್ತು ಟಿಎಸ್‌ಪಿಯ 34,293.69 ಕೋಟಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಯಿತು.

ಇಂದಿನ ಸಭೆಯಲ್ಲಿ ಎಲ್ಲ ಇಲಾಖೆಗಳ ಕಾರ್ಯಕ್ರಮಗಳ ವಿವರವಾದ ಕರಡು ಕ್ರಿಯಾ ಯೋಜನೆಯ ಕುರಿತು ಚರ್ಚಿಸಿ ಅನುಮೋದನೆ ನೀಡಲಾಯಿತು.

ಅಧಿಕಾರಿಗಳ ವಿರುದ್ಧ ಕ್ರಮ

ಈ ಯೋಜನೆಯಡಿ ನಿಗದಿ ಮಾಡಿರುವ ಹಣವನ್ನು ಖರ್ಚು ಮಾಡದಿದ್ದರೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕಾಯ್ದೆ ಹೇಳುತ್ತದೆ. ಕಾಯ್ದೆ ಗಂಭಿರವಾಗಿದೆ. ಹಾಗಾಗಿ ಯಾರೂ ನಿರ್ಲಕ್ಷ್ಯ ಮಾಡದೆ ಹಣವನ್ನು ಖರ್ಚು ಮಾಡಬೇಕು. ಇಲ್ಲದಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ಸಭೆಯಲ್ಲಿ ನೀಡಲಾಗಿದೆ.

ಪ್ರತಿ ಇಲಾಖೆಯ ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗಳ ಅನು?ಾನದ ನಂತರ ಪರಿಣಾಮದ ಮೌಲ್ಯಮಾಪನದ ವರದಿಯನ್ನು ಸಿದ್ಧಪಡಿಸಿ ಫಲಾನುಭವಿಗಳ ಸ್ಥಿತಿಗತಿಯಲ್ಲಿ ಆಗಿರುವ ಬದಲಾವಣೆ ಕುರಿತು ಮಾಹಿತಿ ತರಿಸಬೇಕು ಎಂದು ಅಧಿಕಾರಿಗಳಿಗೆ ಸಭೆಯಲ್ಲಿ ತಿಳಿಸಲಾಗಿದೆ.

ಕಾಂಗ್ರೆಸ್ ಸರ್ಕಾರದ ಹಿಂದಿನ ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಯೋಜನಾ ಉಸ್ತುವಾರಿ ಕೋಶದ ರಚನೆ ಪ್ರಸ್ತಾಪ ಮಾಡಲಾಗಿತ್ತು ಮತ್ತು ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳ ನಿರ್ವಹಣೆ ರೇಣುಕಚಿದಂಬರಂ ಅಧ್ಯಕ್ಷತೆಯ ಸಮಿತಿ ಸಲ್ಲಿಸಿರುವ ವರದಿಯನ್ನು ಅನು?ಾನಗೊಳಿಸಲು ಸಭೆಯಲ್ಲಿ ತೀರ್ಮಾನಿಸಲಾಗಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರವು ಪರಿಶಿ?ಟ ಜಾತಿ, ಪಂಗಡಗಳ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಈಗಾಗಲೇ ಬಜೆಟ್‌ನಲ್ಲಿ ಘೋಷಿಸಿದಂತೆ ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಇದಲ್ಲದೆ ಎಸ್‌ಸಿಪಿ ಮತ್ತು ಟಿಎಸ್‌ಪಿ ಕಾಯ್ದೆ–2013ರ ಸೆಕ್ಷನ್ 7(ಡಿ)ಯನ್ನು ಕೈ ಬಿಡುವುದಾಗಿ ಘೋಷಿಸಲಾಗಿದೆ. ಈ ಕುರಿತು ಕ್ರಮ ಕೈಗೊಳ್ಳಲು ಸಭೆಯಲ್ಲಿ ನಿರ್ಧರಿಸಲಾಗಿದೆ.ಈ ಸಭೆಯಲ್ಲಿ ರಾಜ್ಯ ಅಭಿವೃದ್ಧಿ ಪರಿ?ತ್ ಉಪಾಧ್ಯಕ್ಷ ಹಾಗೂ ಸಚಿವ

ಡಾ. ಹೆಚ್.ಸಿ ಮಹೇದವಪ್ಪ, ಸದಸ್ಯರುಗಳು ಹಾಗೂ ಸಚಿವರುಗಳಾದ ಪಿ. ನಾಗೇಂದ್ರ, ಹೆಚ್.ಕೆ. ಪಾಟೀಲ್, ಪ್ರಿಯಾಂಕ ಖರ್ಗೆ, ಎಂ.ಪಿ. ಸುಧಾಕರ್, ರಾಜ್ಯಸಭಾ ಸದಸ್ಯ ಡಾ. ಎಲ್. ಹನುಮಂತಯ್ಯ, ಶಾಸಕರಾದ ಪಿ.ಎಂ. ನರೇಂದ್ರಸ್ವಾಮಿ, ಪ್ರಸಾದ್ ಅಬ್ಬಯ್ಯ, ತುಕಾರಾಮ್, ಪ್ರಕಾಶ್ ರಾಥೋಡ್, ಸರ್ಕಾರದ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮ ಹಾಗೂ ವಿವಿಧ ಇಲಾಖೆಗಳ ಮುಖ್ಯಸ್ಥರುಗಳು ಪಾಲ್ಗೊಂಡಿದ್ದರು.

# ಗ್ರಾಮೀಣ ಭಾಗದ ಕಟ್ಟಕಡೆಯ ವ್ಯಕ್ತಿಗೂ ಆರೋಗ್ಯ ಸೌಲಭ್ಯ : ಶಾಸಕ ರಘುಮೂರ್ತಿ.

**ಚಳ್ಳಕೆರೆ :** ರಾಜ್ಯ ಸರ್ಕಾರ ಜನಸಾಮಾನ್ಯರ ಆರೋಗ್ಯವನ್ನು ಸದೃಢ ಮತ್ತು ಸುಸ್ಥಿತಿಯಲ್ಲಿಡಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. ಅಭಿವೃದ್ದಿಯ ಸುಧಾರಣೆಯೊಂದಿಗೆ ಆರೋಗ್ಯ ಸುಧಾರಣೆಗೆ ಮಹತ್ತರ ಜವಾಬ್ದಾರಿ ಸರ್ಕಾರ ಮೇಲಿದೆ. ಗ್ರಾಮೀಣ ಭಾಗದ ಕಟ್ಟಕಡೆಯ ವ್ಯಕ್ತಿಗೂ ಸಹ ಆರೋಗ್ಯ ಸಹ ಆರೋಗ್ಯ ಇಲಾಖೆಯ ಸ್ಪಂದಿಸಲಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ನಗರದ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಆವರಣದಲ್ಲಿ ನೂತನ ಸಂಚಾರಿ ಆರೋಗ್ಯ ಘಟಕವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು. ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುವ ಗ್ರಾಮೀಣ ಭಾಗಗಳನ್ನು ಹೊರತು ಪಡಿಸಿ ದುರ್ಗಮ, ಗುಡ್ಡಗಾಡು ಪ್ರದೇಶ ಹಾಗೂ ಸಂಚಾರದ ವ್ಯವಸ್ಥೆ ಮರಿಚಿಕೆಯಾದ ಗ್ರಾಮಗಳಿಗೆ ಸಂಚಾರಿ ಆರೋಗ್ಯ ಘಟಕದ ವಾಹನ ಅಲ್ಲಿಗೆ ಭೇಟಿ ನೀಡಿ ಜನರ ಆರೋಗ್ಯದ ಬಗ್ಗೆ ಪರಿಶೀಲನೆ ನಡೆಸಲಿದೆ ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಕಾಶಿ, ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯನ್ನು ಹೊರತು ಪಡಿಸಿ ವಿವಿಧ ಗ್ರಾಮಗಳಿಗೆ ಸಂಚಾರಿ ಆರೋಗ್ಯ ಘಟಕ ಭೇಟಿ ನೀಡಲಿದೆ. ಒಂದು ಗ್ರಾಮಕ್ಕೆ ಕನಿಷ್ಟ ಒಂದು ವಾರಕ್ಕೆ ಎರಡು ಬಾರಿಯಾದರೂ ಭೇಟಿ ನೀಡಲು ಸೂಚಿಸಿದೆ. ತಜ್ಞ ವೈದ್ಯರು, ಸ್ಟಾಫ್‌ನರ್ಸ್ ಹಾಗೂ ಸಿಬ್ಬಂದಿ ಅಗತ್ಯವಿರುವ ಔಷದೋಪಚಾರುಗಳೊಂದಿಗೆ ಸ್ಥಳಕ್ಕೆ



ಚಳ್ಳಕೆರೆ ನಗರದ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಆವರಣದಲ್ಲಿ ನೂತನ ಸಂಚಾರಿ ಆರೋಗ್ಯ ಘಟಕವಾಹನಕ್ಕೆ ಶಾಸಕ ಟಿ.ರಘುಮೂರ್ತಿ ಚಾಲನೆ ನೀಡಿದರು.

ಭೇಟಿ ನೀಡಲಿದೆ. ಪ್ರತಿನಿತ್ಯ ವಾಹನ ಭೇಟಿ ನೀಡುವ ಗ್ರಾಮ ಹಾಗೂ ಅಲ್ಲಿ ಚಿಕಿತ್ಸೆ ನೀಡಿದ ಅವರ ಎಲ್ಲಾ ವಿವರವನ್ನು ಆನ್‌ಲೈನ್ ಮೂಲಕ ಮಾಹಿತಿ ಸಂಗ್ರಹಿಸಿ ಇಲಾಖೆಗೆ ಕಳುಹಿಸಿಕೊಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಪೌರಾಯುಕ್ತೆ ಕೆ.ಲೀಲಾವತಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಕಾಂಗ್ರೆಸ್ ಮುಖಂಡರಾದ ರಾಮಪ್ಪ, ಟಿ.ಗಿರಿಯಪ್ಪ, ರುದ್ರಮುನಿ ಮುಂತಾದವರು ಉಪಸ್ಥಿತರಿದ್ದರು.

# ಋಣ ತೀರಿಸುವ ಕೆಲಸ ಮಾಡುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ



ದೊಗ್ಗನಾಳ್ ಗ್ರಾಮದಲ್ಲಿ ಒಂದು ಕೋಟಿ ರೂ.ವೆಚ್ಚದ ಡಾಂಬರ್ ರಸ್ತೆ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪನವರಿಂದ ಚಾಲನೆ.

**ಹೊಳಲ್ಕೆರೆ :** ಸರ್ಕಾರ ಯಾವುದೇ ಇರಲಿ ಅನುದಾನ ಹೇಗೆ ತರಬೇಕೆಂಬುದು ಗೊತ್ತಿದೆ. ಕೆಲಸ ಮಾಡುವ ಇಚ್ಚಾಶಕ್ತಿಯಿದ್ದರೆ ಎಲ್ಲವೂ ಬರುತ್ತದೆ. ಸಿಕ್ಕಿರುವ ಅಧಿಕಾರವನ್ನು ಸಾರ್ವಜನಿಕರಿಗೆ ಧಾರೆ ಎರೆಯುವ ಮೂಲಕ ನಿಮ್ಮ ಋಣ ತೀರಿಸುವ ಕೆಲಸ ಮಾಡುತ್ತೇನೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಕ್ಷೇತ್ರದ ಜನತೆಗೆ ಭರವಸೆ ನೀಡಿದರು.

ತಾಲ್ಲೂಕಿನ ರಾಮಗಿರಿ ಹೋಬಳಿಯ ದೊಗ್ಗನಾಳ್ ಗ್ರಾಮದಲ್ಲಿ ಒಂದು ಕೋಟಿ ರೂ.ವೆಚ್ಚದಲ್ಲಿ ದೊಗ್ಗನಾಳ್ ಮತ್ತು ನುಲೇನೂರು ಗ್ರಾಮಗಳ ನಡುವೆ ಡಾಂಬರ್ ರಸ್ತೆ ನಿರ್ಮಾಣ ಕಾಮಗಾರಿಗೆ ಭಾನುವಾರ ಚಾಲನೆ ನೀಡಿ ಮಾತನಾಡಿದರು.

ಹೊಳಲ್ಕೆರೆ ಕ್ಷೇತ್ರದಲ್ಲಿ ಒಂದು ಬಾರಿ ಗೆದ್ದವರು ಎರಡನೆ ಸಲ ಗೆಲ್ಲುವುದಿಲ್ಲ ಎಂಬ ನಂಬಿಕೆಯನ್ನು ಹುಸಿಗೊಳಿಸಿ ನೀವುಗಳು ಈ ಬಾರಿಯ ಚುನಾವಣೆಯಲ್ಲಿ ಮತ್ತೆ ನನ್ನನ್ನು ಗೆಲ್ಲಿಸಿದ್ದೀರ. ರಂಗಾಪುರದಿಂದ ಮಲ್ಲಾಡಿಹಳ್ಳಿ ರಸ್ತೆಗೆ ಒಂದು ಕೋಟಿ ರೂ.ಗಳನ್ನು ನೀಡಿದ್ದೇನೆ. ಇನ್ನು ಐದು ವರ್ಷಗಳಲ್ಲಿ ಹಂತ ಹಂತವಾಗಿ ಎಲ್ಲಾ ಅಭಿವೃದ್ದಿಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.

ಬೊಮ್ಮನಕಟ್ಟೆ, ಬೀದುರ್ಗ ಹಾಗೂ ಹೊಳಲ್ಕೆರೆ ಬಳಿ ಎಲ್ಲಾ ಗುಡ್ಡಗಳನ್ನು ಆಯ್ಕೆ ಮಾಡಿಕೊಂಡು ಸ್ವಚ್ಛಂದ ಪರಿಸರದಲ್ಲಿ ಶಾಲೆಗಳನ್ನು ಕಟ್ಟಿಸಿ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಿದ್ದೇನೆ. ಎಂ.ಎಂ.ಸರ್ಕಾರಿ ಪ್ರೌಢಶಾಲೆಗೆ ಸ್ವಂತ ಹಣದಿಂದ ಬಸ್ ಕೊಟ್ಟಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕರು ಕೊಟ್ಟಿಲ್ಲ. ಕಂಪ್ಯೂಟರ್, ಸುಸಜ್ಜಿತವಾದ ಗ್ರಂಥಾಲಯ, ಸ್ಮಾರ್ಟ್ ಕ್ಲಾಸ್‌ಗಳನ್ನಾಗಿ ಮಾಡಿದ್ದರಿಂದ 1200 ಮಕ್ಕಳು ಸೇರಿದ್ದಾರೆ. ಮುಂದಿನ ದಿನಗಳಲ್ಲಿ ಚಿತ್ರಹಳ್ಳಿ, ಭರಮಸಾಗರದ ಕಡೆಗೂ ಸರ್ಕಾರಿ ಶಾಲೆಗಳಿಗೆ ಬರುವ ಮಕ್ಕಳಿಗೆ ಉಚಿತವಾಗಿ ಬಸ್‌ಗಳ ವ್ಯವಸ್ಥೆ ಒದಗಿಸುತ್ತೇನೆಂದರು.

2008 ರಲ್ಲಿ ಇಲ್ಲಿ ಚುನಾವಣೆಗೆ ನಿಂತಾಗಲೆ ಯಾವ್ಯಾವ ಊರಿಗೆ ಏನು ಕೆಲಸ ಮಾಡಬೇಕು ಎನ್ನುವುದನ್ನು ಪಟ್ಟಿ ಮಾಡಿಕೊಂಡು ಹೋಗಿದ್ದೆ. ಅದರಂತೆ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಕ್ಷೇತ್ರದ ಜನರಿಗೆ ಅತ್ಯವಶ್ಯಕವಾಗಿರುವ ಕೆಲಸ ಮಾಡುವವನೇ ನಿಜವಾದ ರಾಜಕಾರಣಿ. ಹಿಂದೆ ರೈತರಿಗೆ ಎರಡು ಗಂಟೆ ಕರೆಂಟ್ ಇರುತ್ತಿರಲಿಲ್ಲ. ಈಗ ದಿನಕ್ಕೆ ಐದಾರು ಗಂಟೆಗಳ ಕಾಲ ವಿದ್ಯುತ್ ಕಲ್ಪಿಸಿದ್ದೇನೆ. ಕರ್ತವ್ಯದಲ್ಲಿ ಚ್ಯುತಿ ಬಾರದಂತೆ ಎಲ್ಲಾ ಜಾತಿ ಜನಾಂಗದವರನ್ನು ಸಮಾನವಾಗಿ ಕಾಣುತ್ತೇನೆ. ಮುಂದಿನ ದಿನಗಳಲ್ಲಿ ಇನ್ನು ಅತ್ಯುತ್ತಮ ಕೆಲಸಗಳನ್ನು ಮಾಡಲು ಯಾವ ಸಮಸ್ಯೆಯಿಲ್ಲ. ಬಾಂಬೆ, ಡೆಲ್ಲಿ, ನಾಗಪುರ ವಿಶ್ವವಿದ್ಯಾನಿಲಯದ ಕುಲಪತಿಗಳು ಸೇರಿ ನನ್ನ ಅಭಿವೃದ್ದಿ ಕೆಲಸಗಳನ್ನು ನೋಡಿ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಿದ ಪರಿಣಾಮ ಕುವೆಂಪು ವಿಶ್ವವಿದ್ಯಾನಿಲಯ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್‌ರವರ ಕೈಯಿಂದ ನನಗೆ ಡಾಕ್ಟರೇಟ್ ಪದವಿಯನ್ನು ನೀಡಿ ಗೌರವಿಸಿದೆ. ಅದನ್ನೆಲ್ಲಾ ನಿಮಗೆ ಸಮರ್ಪಿಸುತ್ತೇನೆಂದು ಹೇಳಿದರು.

ಜೆ.ಹೆಚ್.ಪಟೇಲ್ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಆರ್ಥಿಕ ತಜ್ಞ ಡಾ.ನಂಜುಂಡಪ್ಪನವರ ಆಯೋಗ ರಚಿಸಿ ರಾಜ್ಯದ ಎಲ್ಲಾ ಕ್ಷೇತ್ರಗಳ ಅಭಿವೃದ್ದಿಗೆ ಸಂಬಂಧಿಸಿದಂತೆ ವರದಿ ನೀಡುವಂತೆ ಸೂಚಿಸಿತ್ತು. ಅದರಂತೆ ಅವರು ನೀಡಿದ ವರದಿಯನ್ವಯ ಪ್ರತಿ ವರ್ಷ ನಾಲ್ಕು ಸಾವಿರ ಕೋಟಿ ರೂ.ಗಳನ್ನು ಅಭಿವೃದ್ದಿಗೆ ಮುಡುಪಾಗಿಡುವ ಕೆಲಸ ಮಾಡಲಾಗಿದೆ. ಸರ್ಕಾರದಿಂದ ಅನುದಾನ ತರುವುದು ನನಗೆ ಕಷ್ಟವೇನಲ್ಲ ಎಂದು ಮತದಾರರಿಗೆ ಅಭಯ ನೀಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಪೂರ್ಣಿಮ ನಾಗರಾಜ್, ಸದಸ್ಯರುಗಳಾದ ಶ್ರೀಮತಿ ಆಶಾ ಪ್ರಕಾಶ್, ಮಹೇಶಣ್ಣ, ಕೃಷ್ಣಮೂರ್ತಿ, ರುದ್ರಪ್ಪ, ರಮೇಶ್‌ಗೌಡ್ರು, ಗ್ರಾಮದ ಹಿರಿಯರು ಈ ಸಂದರ್ಭದಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಆಸ್ಪತ್ರೆಗಳಲ್ಲಿನ ಸಮಸ್ಯೆಗಳಿಗೆ ಪರಿಹಾರ ದಿನೇಶ್ ಗುಂಡೂರಾವ್

**ಬೆಂಗಳೂರು :** ಮೊದಲೇ ತಿಳಿಸಿ ನಾನು ಆಸ್ಪತ್ರೆಗೆ ಬೇಟಿ ಕೊಟ್ಟಿದ್ದೇನೆ. ಇಲ್ಲಿ ಸ್ವಚ್ಛತೆ, ಡಾಕ್ಟರ್?ಗಳ ಹಾಜರಾತಿ ಬಗ್ಗೆ ಸಾಮಾಜಿಕ ಕಾರ್ಯಕರ್ತನ ಮೂಲಕ ದೂರು ಬಂದಿತ್ತು. ವಿಧಾನಸಭೆಯಲ್ಲಿ ಜಯನಗರ ಆಸ್ಪತ್ರೆಗೆ ಭೇಟಿ ನೀಡುತ್ತೇನೆ ಎಂದಿದ್ದೆ. ಆದೇ ರೀತಿ ಇಂದು ಆಸ್ಪತ್ರೆಗೆ ಭೇಟಿ ನೀಡಿದ್ದೇನೆ. ಇನ್ನು ಆಸ್ಪತ್ರೆ ಪರಿಶೀಲನೆ ನಡೆಸುತ್ತಿದ್ದೇನೆ. ದಿಢೀರ್ ಭೇಟಿ ಕೊಡುವುದನ್ನು ಮುಂದಿನ ದಿನಗಳಲ್ಲಿ ಮಾಡುತ್ತೇನೆ. ಹೊರಗಿನಿಂದ ಬಂದು ಆಸ್ಪತ್ರೆಯಲ್ಲಿ ಹಸ್ತಕ್ಷೇಪ ಮಾಡುವುದು ತಪ್ಪು. ಏನೆಲ್ಲಾ ತೊಂದರೆ ಆಗುತ್ತಿದೆ ಅದಕ್ಕೆ ಅಗತ್ಯ ಕ್ರಮಗಳನ್ನ ತೆಗೆದುಕೊಳ್ಳುತ್ತೇವೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

### ಆರ್ ಪಿಎಫ್ ಪೇದೆಯಿಂದ ರೈಲಿನಲ್ಲಿ ಗುಂಡಿನ ದಾಳಿ ನಾಲ್ಕು ಬಲಿ

ಮುಂಬಯಿ (ಮಹಾರಾಷ್ಟ್ರ) : ರೈಲ್ವೆ ರಕ್ಷಣಾ ಪಡೆ (ಆರ್ ಪಿಎಫ್) ಪೇದೆಯೊಬ್ಬ ಏಕಾಏಕಿ ಗುಂಡಿನ ದಾಳಿ ನಡೆಸಿದ್ದರಿಂದ ಆರ್‌ಪಿಎಫ್ ಎಎಸ್‌ಐ, ಮೂವರು ಪ್ರಯಾಣಿಕರು ಸೇರಿ ನಾಲ್ವರು ಮೃತಪಟ್ಟು, ಮೂವರು ಗಾಯಗೊಂಡಿರುವ ದಾರುಣ ಘಟನೆ ಜೈಪುರದಿಂದ ಮುಂಬೈಗೆ ತೆರಳುತ್ತಿದ್ದ ರೈಲಿನಲ್ಲಿ ನಡೆದಿದೆ.

ಈ ಘಟನೆಯಿಂದಾಗಿ ಪ್ರಯಾಣಿಕರು ಬೆಚ್ಚಿ ಬಿದ್ದಿದ್ದು, ಕೆಲಕಾಲ ಆತಂಕ ಪರಿಸ್ಥಿತಿ ನಿರ್ಮಾಣವಾಗಿತ್ತು.

ಗುಂಡಿನ ದಾಳಿ ನಡೆಸಿದ ಆರ್‌ಪಿಎಫ್ ಪೇದೆ ಚೇತನ್ ಸಿಂಗ್ ನನ್ನು ಬಂಧಿಸಿ ತೀವ್ರ ವಿಚಾರಣೆ ನಡೆಸಲಾಗಿದೆ ಎಂದು ನಗರ ರೈಲ್ವೆ ಪೊಲೀಸರು ತಿಳಿಸಿದ್ದಾರೆ.

ಮೃತ ಆರ್‌ಪಿಎಫ್ ಎಎಸ್‌ಐ ಅವರನ್ನು ಟಿಕಾ ರಾಮ್ ಮೀನಾ ಎಂದು ಗುರುತಿಸಲಾಗಿದ್ದು ಉಳಿದ ಮೂವರು ಪ್ರಯಾಣಿಕರ ಹೆಸರು ವಿಳಾಸ ಸದ್ಯಕ್ಕೆ ತಿಳಿದುಬಂದಿಲ್ಲ.

ಘಟನೆಯಲ್ಲಿ ಮೂವರು ಪ್ರಯಾಣಿಕರು ಗಾಯಗೊಂಡಿ–ದ್ದು ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಜೈಪುರದಿಂದ ಮುಂಬೈಗೆ ಬೆಳಗಿನ ಜಾವ 5 ಗಂಟೆ ಸುಮಾರಿಗೆ ಹೊರಟ ರೈಲು ವಾಪಿ ರೈಲು ನಿಲ್ದಾಣ ಹಾಗೂ ಬೋರಿವಲಿ ರೈಲು ನಿಲ್ದಾಣದ ಮಧ್ಯೆ ಸಂಚರಿಸುತ್ತಿದ್ದಾಗ ಆರ್‌ಪಿಎಫ್ ಪೇದೆಯು ಎಎಸ್‌ಐ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಇದಾದ ಬಳಿಕ ಮೂವರು ಪ್ರಯಾಣಿಕರ ಮೇಲೂ ಆತ ಗುಂಡಿನ ದಾಳಿ ನಡೆಸಿದ್ದಾನೆ.

ರೈಲು ಪಾಲ್ಘರ್ ನಿಲ್ದಾಣವನ್ನು ದಾಟಿದ ನಂತರ ಕಾನ್‌ಸ್ಟೇಬಲ್, ಚಲಿಸುತ್ತಿದ್ದ ಜೈಪುರ ಎಕ್ಸ್‌ಪ್ರೆಸ್ ಒಳಗೆ ಇದ್ದಕ್ಕಿದ್ದಂತೆ ಗುಂಡು ಹಾರಿಸಿದ್ದು ಶಸ್ತ್ರಾಸ್ತ್ರ ಸಹಿತ ಆರೋಪಿಯನ್ನು ಬಂಧಿಸಲಾಗಿದೆ.

ಆರೋಪಿ ಚೇತನ್ ಸಿಂಗ್ ಅವರನ್ನು ಎಸ್ಕಾರ್ಟ್‌ಗಾಗಿ ನಿಯೋಜಿಸಲಾಗಿತ್ತು. ಅವರೇಕೆ ತಮ್ಮ ಸರ್ವಿಸ್ ಗನ್ ತೆ–ಗೆದು ಗುಂಡಿನ ದಾಳಿ ನಡೆಸಿದರು ಎಂಬ ಕುರಿತು ಇದುವರೆಗೆ ಮಾಹಿತಿ ಲಭ್ಯವಾಗಿಲ್ಲ. ತನಿಖೆಯಿಂದ?ೇ ಮಾಹಿತಿ ಲಭ್ಯವಾಗಲಿದೆ.

ಗುಂಡಿನ ದಾಳಿ ಮಾಡುತ್ತಲೇ ಆತ ರೈಲಿನಿಂದ ಹೊರಗೆ ಜಿಗಿದಿದ್ದಾರೆ. ಬಳಿಕ ಆರ್‌ಪಿಎಫ್ ಸಿಬ್ಬಂದಿ ಆರೋಪಿಯನ್ನು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

ಗುಂಡಿನ ದಾಳಿಯಿಂದಾಗಿ ಪ್ರಯಾಣಿಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಘಟನೆ ಕುರಿತಾದ ಮಾಹಿತಿಯನ್ನು ಉತ್ತರ ಜಿಆರ್‌ಪಿ ಡಿಸಿಪಿಗೆ ನೀಡಲಾಗಿದೆ ಎಂದು ರೈಲ್ವೆ ರಕ್ಷಣಾ ಪಡೆ ಹೇಳಿದ್ದು ತನಿಖೆಯನ್ನು ಮುಂದುವರೆಸಲಾಗಿದೆ.

ದಾಳಿ ಬಳಿಕ ರೈಲನ್ನು ಮೀರಾ–ರೋಡ್ ದಹಿಸರ್‌ನಲ್ಲಿ ಕೆಲ ಕಾಲ ನಿಲ್ಲಿಸಲಾಗಿತ್ತು. ಸದ್ಯಕ್ಕೆ ಈ ರೈಲು ಮುಂಬೈ ಸೆಂಟ್ರಲ್‌ಗೆ ಆಗಮಿಸಿದೆ. 12957 ಸಂಖ್ಯೆಯ ಎಕ್ಸ್‌ಪ್ರೆಸ್ ರೈಲು ಇದಾಗಿದ್ದು, ಬಿ–5 ಕೋಚ್‌ನಲ್ಲಿ ಘಟನೆ ನಡೆದಿದೆ. ಆರ್‌ಪಿಎಫ್ ಯೋಧರ ನಡುವಿನ ಜಗಳದಿಂದ ಘಟನೆ ನಡೆದಿದೆ ಎಂದು ಮೂಲಗಳು ತಿಳಿಸಿವೆ.

### ಸಿಟ್ರಿಜನ್, ನೈಟ್ರೋಜನ್ ಮಾತ್ರೆಗಳ ಅಕ್ರಮ ದಂಧೆ

**ಚಿತ್ರದುರ್ಗ :** ನಗರದ ಹೊರವಲಯದಲ್ಲಿರುವ ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳೆದ ಕೆಲವು ದಿನಗಳ ಹಿಂದೆ ಅವಧಿ ಮೀರದಿರುವ ರಾಶಿ ರಾಶಿ ಸಿಟ್ರಿಜನ್, ನೈಟ್ರೋಜನ್ ಮಾತ್ರೆಗಳನ್ನು ಎಸೆದಿರುವುದನ್ನು ನೋಡಿದರೆ ಅಕ್ರಮ ದಂಧೆ ನಡೆಯುತ್ತಿದೆ ಎನ್ನುವುದರಲ್ಲಿ ಅನುಮಾನವಿಲ್ಲ ಎಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಗಂಭೀರವಾಗಿ ಆಪಾದಿಸಿದ್ದಾರೆ.

ಮಾತ್ರೆಯ ಮೇಲೆ ನಾಟ್ ಫಾರ್ ಸೇಲ್ ಕರ್ನಾಟಕ ಸರ್ಕಾರ ಎಂದು ಮುದ್ರಿತವಾಗಿದೆ. 2024 ರವರೆಗೆ ಮಾತ್ರೆಯ ಅವಧಿಯಿದ್ದರೂ ಬೀದಿಯಲ್ಲಿ ರಾಶಿ ರಾಶಿಯಾಗಿ ಎಸೆದಿರುವುದರ ಹಿಂದೆ ಅಕ್ರಮವಿದೆ ಎನ್ನುವುದು ಎದ್ದು ಕಾಣುತ್ತಿದೆ. ಶೀತ, ಕೆಮ್ಮು, ಇನ್ನಿತರೆ ತೊಂದರೆಗಳಿಂದ ನರಳುತ್ತಿರುವವರಿಗೆ ಕೆಲವು ದಿನಗಳಿಂದ ಈ ಮಾತ್ರೆಗಳನ್ನು ನೀಡಲಾಗುತ್ತಿದೆ. ಬಡಾವಣೆ ಪೊಲೀಸ್ ಠಾಣೆಗೆ ಹೋಗುವ ಸರ್ವಿಸ್ ರಸ್ತೆಯಲ್ಲಿ ಮಾತ್ರೆಗಳನ್ನು ಎಸೆದಿರುವುದು ನಾನಾ ರೀತಿಯ ಅನುಮಾನಗಳಿಗೆ ಕಾರಣವಾಗಿದೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಹಾಗೂ ಔಷಧ ನಿಯಂತ್ರಕರನ್ನು ಕರೆಸಿ ಮಾತ್ರೆಗಳನ್ನು ವಶಕ್ಕೆ ನೀಡಿರುವ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಇದರ ಹಿಂದಿರುವ ದೊಡ್ಡ ಜಾಲವನ್ನು ಬಯಲಿಗೆಳೆಯುವಂತೆ ಒತ್ತಾಯಿಸಿದ್ದಾರೆ.

# ಜಗಜ್ಯೋತಿ ಬಸವಣ್ಣನವರ ದೂರದೃಷ್ಟಿಕೋನದ ಫಲವಾಗಿ ಸಮಾಜದಲ್ಲಿ ಧಾರ್ಮಿಕ ಜಾಗೃತಿ ಗಟ್ಟಿಯಾಗಿ ನೆಲೆಯೂರಿದೆ : ಚನ್ನವೀರಶಿವಾಚಾರ್ಯ ಮಹಾಸ್ವಾಮಿ.

**ಚಳ್ಳಕೆರೆ :** ವಿಶ್ವಕ್ಕೆ ಶಾಂತಿಮಂತ್ರ ಸಾರಿದ ಬಸವಣ್ಣನವರು ಅಜ್ಞಾನದ ಕತ್ತಲನ್ನು ದೂರವಾಗಿಸಲು ಜ್ಞಾನದ ಬೆಳಕನ್ನು ತಮ್ಮದೆ ತತ್ವ, ಸಂದೇಶಗಳ ಮೂಲಕ ನೀಡಿದ ಮಹಾನ್ ಶ್ರೇಷ್ಠ ಯೋಗಿಗಳು. ಬಸವ ತತ್ವದಲ್ಲಿ ಎಲ್ಲಾ ರೀತಿಯ ಅಭಿವೃದ್ಧಿಪರ ಚಿಂತನೆ ಅಡಗಿದೆ. ಧಾರ್ಮಿಕ ಪರಿವರ್ತನೆಯ ಬಗ್ಗೆ ಸಾಕಷ್ಟು ವಿಚಾರಗಳಿವೆ. ಯಾವ ವ್ಯಕ್ತಿ ಬಸವಣ್ಣನವರ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಳ್ಳುತ್ತಾನೋ ಅವನೂ ಸಹ ಈ ಸಮಾಜಕ್ಕೆ ಬೆಳಕು ನೀಡುವ ಜ್ಞಾನಿಯಾಗುತ್ತಾನೆಂದು ಕಲ್ಲುಹೊಳೆ ಮಠದ ಚನ್ನವೀರಶಿವಾಚಾರ್ಯ ಮಹಾಸ್ವಾಮಿ ತಿಳಿಸಿದರು.



ಚಳ್ಳಕೆರೆ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ, ನಿವೃತ್ತ ನೌಕರರ ಸನ್ಮಾನ ಸಮಾರಂಭವನ್ನು ಯೋಜನೆ ಮತ್ತು ಸಾಂಖಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಉದ್ಘಾಟಿಸಿದರು.

ಅವರು, ಭಾನುವಾರ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವೀರಶೈವ ಲಿಂಗಾಯಿತ ನೌಕರರ ಕ್ಷೇಮಾಭಿವೃದ್ಧಿ ಸಂಘ, ವೀರಶೈವ ಸಮಾಜ ಸೇವಾ ಸಂಘ, ವೀರಶೈವ ಸಂಘಟನೆಗಳ ಒಕ್ಕೂಟ, ವೀರಶೈವ ಮಹಿಳಾ ಸಂಘ, ವಿದ್ಯಾರ್ಥಿನಿಲಯ, ಗ್ರಾಮಾಂತರ ವೀರಶೈವ ಸಂಘ, ವೀರಶೈವ ಲಿಂಗಾಯತ ಮಹಾಸಭಾ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ, ನಿವೃತ್ತ ನೌಕರರ ಸನ್ಮಾನ ಸಮಾರಂಭದ ದಿವ್ಯಸಾನಿಧ್ಯವಹಿಸಿ ಮಾತನಾಡಿದರು. ವಿದ್ಯಾರ್ಥಿದೆಸೆಯಲ್ಲೇ ಮೌಲ್ಯಗಳನ್ನು ರೂಪಿಸಿಕೊಂಡ ವಿದ್ಯಾರ್ಥಿ ಸಮಾಜಮುಖಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ. ಇಂದು ವೀರಶೈವ ಸಮಾಜ ಎಲ್ಲಾ ಸಮುದಾಯಗಳಿಂದ ವಿಶ್ವಾಸ, ಗೌರವ ಗಳಿಸಿದೆ ಎಂದರೆ ಅದರ ಕೀರ್ತಿ ಜಗಜ್ಯೋತಿ ಬಸವೇಶ್ವರರಿಗೆ ಸಲ್ಲುತ್ತದೆ ಎಂದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಯೋಜನೆ ಮತ್ತು ಸಾಂಖಿ–ಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಪ್ರತಿಭೆ ಯಾರ ಸೊತ್ತು ಅಲ್ಲ, ಬದಲಾಗಿ ಸಾಧನೆ ಮಾಡಿದವರು ಮಾತ್ರ ಪ್ರತಿಭಾವಂತರಾಗಲು ಸಾಧ್ಯ. ಇಂದಿನ ಶಿಕ್ಷಣ ನೀತಿ, ನಿಯಮಗಳನ್ನು ನೋಡಿದರೆ ಪ್ರತಿಭೆಯೇ ಮೂಲ ಮಾನದಂಡವಾಗುತ್ತದೆ. ಆದ್ದರಿಂದ ಸಮುದಾಯದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿಗೆ ಆದ್ಯತೆ ನೀಡಬೇಕು ಎಂದರು.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ವೀರಶೈವ ಸಮಾಜ ಕಳೆದ ಹಲವಾರು ದಶಕಗಳಿಂದ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಾ ಬಂದಿದೆ. ಸಮುದಾಯದ ಪ್ರಗತಿಯ ಜೊತೆಗೆ ಸಮಾಜದ ಪ್ರಗತಿಯನ್ನೂ ಸಹ ದೃಷ್ಟಿಯಲ್ಲಿಟ್ಟುಕೊಂಡು ಕಾರ್ಯನಿರ್ವಹಿಸುತ್ತಿದೆ. ಯಾವುದೇ ಕಾರಣಕ್ಕೂ ಬೇರೆ ಸಮುದಾಯದವರನ್ನು ದೂಷಿಸದೆ ಎಲ್ಲರಲ್ಲೂ ಒಳಿತನ್ನು ಕಾಣುವ ಆತ್ಮವಿಶ್ವಾಸ ಹೊಂದಿದ ಸಮಾಜ ವೀರಶೈವ ಸಮಾಜ ಎಂದರು.

ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಾತನಾಡಿ, ವೀರಶೈವ ಸಮಾಜ ಇಂದು ಬೇರೆ ಎಲ್ಲಾ ಸಮಾಜದಂತೆ ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗುವ ಕಾರ್ಯವನ್ನು ಮಾಡುತ್ತಾ ಬಂದಿದೆ. ಸಮುದಾಯದ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರದ ಮೂಲಕ ಅವರಿಗೆ ಆತ್ಮವಿಶ್ವಾಸ ತುಂಬಲಾಗುತ್ತಿದೆ. ಇಂದು ವೀರಶೈವ ಸಮಾಜಕ್ಕೆ ಅಗತ್ಯವಿರುವ ಸೌಲಭ್ಯಗಳನ್ನು ಸರ್ಕಾರದಿಂದ ಪಡೆಯುವ ನಿಟ್ಟಿನಲ್ಲಿ ನಾನು ಸಹ ನಿಮ್ಮೊಂದಿಗೆ ಕೈಜೋಡಿಸುತ್ತೇನೆ. ಸಮುದಾಯದ ಕಲ್ಯಾಣಕ್ಕಾಗಿ ಶ್ರಮಿಸುವೆ ಎಂದರು.

ಸಮಾಜದ ಅಧ್ಯಕ್ಷ ಕೆ.ಸಿ.ನಾಗರಾಜು ಮಾತನಾಡಿ, ಎಲ್ಲಾ ಸಮುದಾಯಗಳಂತೆ ವೀರಶೈವ ಸಮುದಾಯವೂ ಸಹ ಸಂಘಟನೆ ವಿಚಾರದಲ್ಲಿ ಇಂದು ಹೆಜ್ಜೆ ಮುಂದಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ವೀರಶೈವ ಸಮಾಜದ ಸ್ಥಿತಿಗತಿಗಳ ಬಗ್ಗೆ ಅಧ್ಯಯನ ನಡೆಸಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವೀರಶೈವ ನೌಕರರ ಸಂಘದ ಅಧ್ಯಕ್ಷ ಸಿ.ಗುರುಸಿದ್ದಮೂರ್ತಿ ಮಾತನಾಡಿ, ಪ್ರತಿಭಾಪುರಸ್ಕಾರ ಹಾಗೂ ನಿವೃತ್ತ ನೌಕರರ ಸಂಘದ ಕಾರ್ಯಕ್ರಮ ನಮ್ಮ ಸಮಾಜದಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿವರ್ಷ ಹಮ್ಮಿಕೊಳ್ಳಲಾಗುತ್ತಿದೆ. ಸಮುದಾಯದ ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಪ್ರಗತಿಯ ವಿಶ್ವಾಸ ಹುಟ್ಟಿಸಲು ಪ್ರೇರಕ. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯ 81 ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ, 18 ನಿವೃತ್ತ ನೌಕರರಿಗೆ ಸನ್ಮಾನವನ್ನು ಮಾಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಸ್.ತಾಳೀಕೆರಪ್ಪ, ವಾಣಿಜ್ಯೋದ್ಯಮಿ ರುದ್ರಮುನಿಯಪ್ಪ, ಕೆ.ಬಸವರಾಜು(ವಂದನಾ) ದಲ್ಲಾಲರ ಸಂಘದ ಅಧ್ಯಕ್ಷ ಅರವಿಂದ್, ಟಿ.ಆರ್. ಕಿರಣ್‌ಶಂಕರ್, ಸಿ.ಎಸ್.ಜಯಪ್ರಕಾಶ್, ಟಿ.ಪ್ರಭುದೇವ್, ಡಾ.ಕೆ.ಎಂ.ಜಯಕುಮಾರ್, ಪದ್ಮನಾಗರಾಜು, ವಿ.ಮಂಜುನಾಥ, ಪ್ರಸನ್ನಕುಮಾರ್, ಶಿವಪುತ್ರಪ್ಪ, ಕೆ.ಎಂ. ಕೊಟ್ರೇಶ್, ಡಿ.ಎಂ.ತಿಪ್ಪೇಸ್ವಾಮಿ, ರಾಜಣ್ಣ, ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ಬಯಲು ಸೀಮೆ ಮಂಡಳಿಯಲ್ಲಿ ಲೆಕ್ಕ ಇಲ್ಲ ಪಕ್ಕ ಕಾರ್ಯದರ್ಶಿ ಸೇರಿ ಮೂವರು ಸಸ್ಪೆಂಡ್

## 38 ಕೋಟಿ ಅನುದಾನಕ್ಕೆ 406 ಕೋಟಿ ಕಾಮಗಾರಿಗೆ ಆದೇಶ

**ನಮ್ಮ ಜನ ವಾರ್ತೆ ಚಿತ್ರದುರ್ಗ :** ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯಲ್ಲಿ ಜಿಲ್ಲಾ ಕೇಂದ್ರ ಚಿತ್ರದುರ್ಗದಲ್ಲಿ ಕೇಂದ್ರ ಕಚೇರಿ ಹೊಂದಿ ರುವ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಭಾರೀ ಪ್ರಮಾಣದ ಗೋಲ್ ಮಾಲ್ ನಡೆದಿದ್ದು ಕಾರ್ಯದರ್ಶಿ, ಉಪ ಕಾರ್ಯದರ್ಶಿ ಸೇರಿ ಮೂವರ ಅಮಾನತು ನಿಯಮ ಪಡಿಸಿ ರಾಜ್ಯ ಸರ್ಕಾರದ ಆದೇಶ ಹೊರಡಿಸಿದೆ.

**2022–23ನೇ ಸಾಲಿನಲ್ಲಿ ಸರ್ಕಾರ :**

ಉಪ ಕಾರ್ಯದರ್ಶಿ ಎಚ್. ಕೃ?ನಾಯ್ಕ , ದ್ವಿತೀಯ ದರ್ಜೆ ಸಹಾಯಕ ಪಾಪಯ್ಯ ಅವರನ್ನು ಅಮಾನತು ಮಾಡಿ ಶುಕ್ರವಾರ ಆದೇಶ ಹೊರಡಿಸಲಾಗಿದೆ. ಬಯಲು ಸೀಮೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರು ಹಾಗೂ ಸರ್ಕಾರದ ಗಮನಕ್ಕೆ ಬಾರದಂತೆ ಸುಮಾರು 406 ಕೋಟಿ ಕಾಮಗಾರಿಗಳಿಗೆ ಈ ಮೂವರು ಕಾರ್ಯಾದೇಶ ನೀಡಿದ್ದರು. ಈ ಸಂಗತಿ ಅಂತ ಸರ್ಕಾರ ಜು.20ರಂದು ಐದು ಜನರ ತನಿಖಾಧಿಕಾರಿಗಳ ತಂಡ ಕಳಿಸಿ ಪರಿಶೀಲನೆ ಕಾರ್ಯ ನಡೆಸಿದಾಗ ಕಡತಗಳ ತಿದ್ದುಪಡಿ ಎಸಗಿರುವುದು ಬೆಳಕಿಗೆ ಬಂದಿರುವ ಜೊತೆಗೆ ಭಾರೀ ಪ್ರಮಾಣದ ಅಕ್ರಮ ಬಯಲಾಗಿದೆ.

ಸರ್ಕಾರ ಅನುಮೋದಿಸಿ ಬಿಡುಗಡೆಗೊಳಿಸಿದ ಅನುದಾನಕ್ಕಿಂತ ಹೆಚ್ಚಿನ ಮೊತ್ತದ ಹಣವನ್ನು ಕಾಮಗಾರಿಗಳಿಗೆ ಬಾಹಿರವಾಗಿ ಆಡಳಿತಾತ್ಮಕ ಅನುಮೋದನೆ ನೀಡಿರುವುದು, ಅನುದಾನ ಬಿಡುಗಡೆ ಮಾಡಿರುವುದು, ಮಂಡಳಿ ಅನುದಾನ ದುರುಪಯೋಗ ಪಡಿಸಿಕೊಂಡಿರುವುದು ಮತ್ತು ಕಡತಗಳಲ್ಲಿ ಅನಧಿಕೃತವಾಗಿ ತಿದ್ದುಪಡಿ ಮಾಡಿರುವುದು ಪ್ರಾಥಮಿಕ ತನಿಖಾ ವರದಿಯಿಂದ ತಿಳಿದು ಬೆಳಕಿಗೆ ಬಂದಿದೆ.

**ಕಾರ್ಯದರ್ಶಿ ಶ್ರೀಧರ ಬಿ.ಭಜಂತ್ರಿ :**

14 ಜಿಲ್ಲೆ ಹಾಗೂ 70 ವಿಧಾನಸಭೆ ಕ್ಷೇತ್ರದ ವ್ಯಾಪ್ತಿ ಒಳಗೊಂಡಿರುವ ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ವಾರ್ಷಿಕ ಬಜೆಟ್‌ನಲ್ಲಿ ಬಹುತೇಕ 40 ರಿಂದ 50 ಕೋಟಿ ಅನುದಾನ ಕಾಯ್ದಿರಿಸಲಾಗುತ್ತದೆ. ಇ?ೇ ಅನುದಾನಕ್ಕೆ ಮಂಡಳಿ ಸಭೆಯಲ್ಲಿಟ್ಟು ಅನುಮೋದನೆ ಪಡೆದು ನಂತರ ಸರ್ಕಾರದ ಗಮನಕ್ಕೆ ತಂದು ಕಾಮಗಾರಿ ಕೈಗೆತ್ತಿಕೊಳ್ಳಬೇಕು. ಕಳೆದ ವ?ೆ ಸರ್ಕಾರ ತುಸು ಹೆಚ್ಚು ಅಂದರೆ 150 ಕೋಟಿ ಅನುದಾನ ನೀಡಿತ್ತು. ಈ ಬಾರಿ 38 ಕೋಟಿ ಅನುದಾನ ಕಲ್ಪಿಸಲಾಗಿದೆ. ಇ?ು ಮೊತ್ತಕ್ಕೆ ಕ್ರಿಯಾ ಯೋಜನೆ ತಯಾರು ಮಾಡಬೇಕಿತ್ತು. ಆದರೆ ಅಚ್ಚರಿ ಎಂದರೆ ಈ ವ?ದ ಅನುದಾನ ಮಂಡಳಿ ಕಾರ್ಯದರ್ಶಿ ಹಣ ಪಾವತಿ ಮಾಡಬೇಕಾಗುತ್ತದೆ. ಕಾಯ್ದಿರಿಸುವ ಮುನ್ನವೇ ಮಂಡಳಿ ಕಾರ್ಯದರ್ಶಿ ಸುಮಾರು 406 ಕೋಟಿ ಕಾಮಗಾರಿಗೆ ಕಾರ್ಯಾದೇಶ ನೀಡಿದ್ದಾರೆ. ಅಂ–ದರೆ ಬರೋಬ್ಬರಿ 368 ಕಾಮಗಾರಿ ಸ್ಪಿಲ್ ಓವರ್ ಆಗುತ್ತವೆ.

**ಮೂವರು ವ್ಯಕ್ತಿಗಳ ನಿರ್ಧಾರ :**

ಮಂಡಳಿಯಿಂದ ಕಾರ್ಯಾದೇಶ ನೀಡಿರುವುದರಿಂದ ಕಡೆ ಕಾಮಗಾರಿಗಳು ಆರಂಭವಾಗಿವೆ. ಇವಕ್ಕೆಲ್ಲ ಆದ್ಯತೆ ಅನುಸಾರ ಬಿಲ್ ಪಾವತಿಯನ್ನು ಮಾಡಬೇಕು. ಮಂಡಳಿಗೆ ಈ ವಾರ್ಷಿಕ ಕ್ರಿಯಾ ಯೋಜನೆ ತಯಾರಿಸಿ ಬಾರಿ ನೀಡಲಾದ ಅನುದಾನದಲ್ಲಿ ಬಿಲ್ ನೀಡಲು ಸಾಧ್ಯವಾಗದಿದ್ದರೆ ಇವೆಲ್ಲ ಮುಂದುವರಿದ ಓವರ್) ಕಾಮಗಾರಿಗಳಾಗುತ್ತವೆ. ಹಾಲಿ ಮಂಡಳಿಗೆ ನೀಡುತ್ತಿರುವ ಅನುದಾನಕ್ಕೆ ಲೆಕ್ಕಾಚಾರ ಹಾಕಿದರೆ ಮುಂದಿನ 10 ವರ್ಷ ಕಾಲ ಹೊಸ ಕಾಮಗಾರಿ ಕೈಗೆತ್ತಿಕೊಳ್ಳದೆ ಹಳೆಯ ಕಾಮಗಾರಿಗಳಿಗೆ ಬಿಲ್ ಪಾವತಿ ಮಾಡಬೇಕಾಗುತ್ತದೆ.

ಬಯಲುಸೀಮೆ ಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶ್ರೀಧರ ಭಜಂತ್ರಿ ಮೂಲತಃ ಉನ್ನತ ಶಿಕ್ಷಣ ಇಲಾಖೆ , ಉಪ ಕಾರ್ಯದರ್ಶಿ ಕೃಷ್ಣನಾಯ್ಕ ಮೂಲತಃ ಗ್ರಾಮೀಣಾಭಿವೃದ್ಧಿ ಮತ್ತು ಕೋಟಿ ಪಂಚಾಯತ್ ರಾಜ್ ಇಲಾಖೆ ಮತ್ತು ದ್ವಿತೀಯ ದರ್ಜೆ ಸಹಾಯಕರಾಗಿ ಕೆಲಸ ನಿರ್ವಹಿಸುತ್ತಿರುವ ಪಾಪಯ್ಯ ಮೂಲತಃ ಲೋಕೋಪಯೋಗಿ ಇಲಾಖೆಗೆ ಸೇರಿದವರಾಗಿದ್ದು ಇವರು ನಿಯೋಜನೆ ಮೇರೆಗೆ ಬಯಲು ಸೀಮೆ ಮಂಡಳಿಗೆ ಬಂದಿದ್ದಾರೆ.

ಈ ಮೂರು ಜನರನ್ನು ಜುಲೈ 27ರಂದು ಅಮಾನತು ಗೊಳಿಸಿ ಮಾತೃ ಇಲಾಖೆಗೆ ವಾಪಸ್ ಕಳಿಸಲಾಗಿದೆ.

# ಆರೋಗ್ಯ ಇಲಾಖೆ ?ಪಿಂಕ್ ಐ? ಭೀತಿಗೆ ಮಾರ್ಗಸೂಚಿ ರಿಲೀಸ್

**ನಮ್ಮ ಜನ ವಾರ್ತೆ ಬೆಂಗಳೂರು :** ರಾಜ್ಯದಲ್ಲಿ ಹವಮಾನ ಬದಲಾದಂತೆ ದಿನದಿಂದ ದಿನಕ್ಕೆ ಪಿಂಕ್ ಐ **(Pink Eye)** ರೋಗ ಹೆಚ್ಚಾಗಿದ್ದು, ಮುನ್ನೆಚ್ಚರಿಕೆಯ ನಿಟ್ಟಿನಲ್ಲಿ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹೊಸ ಮಾರ್ಗಸೂಚಿ ಬಿಡುಗಡೆ ಮಾಡಲಾಗಿದೆ.



ಕರ್ನಾಟಕದಲ್ಲಿ ಕೊರೊನಾ ಬೆನ್ನಲ್ಲೆ ಡೆಂಗ್ಯೂ ಪ್ರಕರಣ ಇದೀಗ ಮತ್ತೆ ಮದ್ರಾಸ ಐ ಅಥವಾ ಪಿಂಕ್ ಐ ಅಥವಾ ಕಾಂಜಂಕ್ಟಿವಿಟಿಸ್ ಎಂದು ಕರೆಯುವ ರೋಗಗಳು ಜನರನ್ನು ಬಾಧಿಸುತ್ತಿದೆ.

ಇದರಿಂದ ಪೋಷಕರಿಗೆ ಹೊಸ ಭಯ ಶುರುವಾಗಿದ್ದು, ಮಕ್ಕಳನ್ನು ಶಾಲೆಗಳಿಗೆ ಕಳುಹಿಸೋದ್ರಿಂದ ಈ ಪಿಂಕ್ ಐ ಹರಡುವಂತಹ ಆತಂಕ ಹೆಚ್ಚಾಗಿದೆ ಅನ್ನೋ ಹೊಸ ಆತಂಕ ಶುರುವಾಗಿದೆ.

ಅಲ್ಲದೇ ದಿನದಿಂದ ದಿನಕ್ಕೆ ಪಿಂಕ್ ಐ ಹರಡುವುದು ಹೆಚ್ಚಾಗಿದೆ. ಈ ನಿಟ್ಟಿನಲ್ಲಿ ಇದೀಗ ಆರೋಗ್ಯ ಇಲಾಖೆ ಹೊಸ ಮಾರ್ಗಸೂಚಿ ರಿಲೀಸ್ ಮಾಡಲಾಗಿದೆ. ಅಲ್ಲದೇ ಈ ರೋಗದ ವಿರುದ್ಧ ಆರೋಗ್ಯ ಸಚಿವ ದಿನೇಶ್? ಗುಂಡೂರಾವ್? ಮಾತನಾಡಿ ವಿಶೇಷ ಚಿಕಿತ್ಸೆ ನೀಡಲು ಸೂಚನೆ ನೀಡುತ್ತೇನೆ ಎಂದು ಭರವಸೆಯನ್ನು ನೀಡಲಾಗಿದೆ ಎಂದು ವರದಿಯಾಗಿದೆ.

### ಪಿಂಕ್ ಐ ರೋಗದ ಲಕ್ಷಣಗಳು

- ಕಣ್ಣು ಕೆಂಪಾಗುವುದು, ನೀರು ಸೋರುವಿಕೆ
- ಅತಿಯಾದ ಕಣ್ಣೀರು
- ಕಣ್ಣಿನಲ್ಲಿ ತುರಿಕೆ
- ಸತತ ಕಣ್ಣು ನೋವು ಮತ್ತು ಚುಚ್ಚುವಿಕೆ
- ಬೆಳಕನ್ನು ನೋಡಲು ಸಾಧ್ಯವಾಗದೇ ಇರುವುದು
- ದೃಷ್ಟಿ ಮಂಜಾಗುವುದು
- ಕಣ್ಣಿನ ಎರಡು ರೆಪ್ಪೆಗಳು ಕೀವು ಮಿಶ್ರಿತದಿಂದ ಕೂಡಿರುವುದು

**ಪಿಂಕ್ ಐ ರೋಗದ ಮುನ್ನೆಚ್ಚರಿಕೆ :**

- ಕೈಗಳಿಂದ ಪದೇ ಪದೇ ಕಣ್ಣುಗಳನ್ನ ಮುಟ್ಟಬೇಡಿ.
- ಸ್ವಯಂ ಚಿಕಿತ್ಸಾ ವಿಧಾನಗಳನ್ನ ಮಾಡಬಾರದು.

ಸೋಂಕಿತ ವ್ಯಕ್ತಿಯ ಸನಿಹದಿಂದ ದೂರವಿರಿ.
ಸೋಂಕಿತ ವ್ಯಕ್ತಿಗಳು ಬಳಸಿದ ವಸ್ತುಗಳನ್ನ ಬಳಸುವುದು.

**ಪಿಂಕ್ ಐ ರೋಗ ತಡೆಗಟ್ಟುವ ವಿಧಾನ :**

- ವೈಯಕ್ತಿಕವಾಗಿ ಸ್ವಚ್ಛತೆ ಗೆ ಆದ್ಯತೆ ಕೊಡಿ
- ಆರೋಗ್ಯವಂತ ವ್ಯಕ್ತಿಯು ಸೋಂಕು ಇರುವ ವ್ಯಕ್ತಿಯ ಕಣ್ಣಿನ ನೇರ ಸಂಪರ್ಕದಿಂದ ದೂರ ಇರುವುದು.
- ಸೋಂಕಿತ ವ್ಯಕ್ತಿ ಬಳಸಿದ ಕರವಸ್ತ್ರ ಮತ್ತು ಇತರ ವಸ್ತುಗಳನ್ನು ಬಳಸಬಾರದು.
- ಆಗಾಗ್ಗೆ ಸೋಪು ನೀರಿನಿಂದ ಕೈಗಳನ್ನ ತೊಳೆಯಬೇಕು.
- ಸೋಂಕಿತ ವ್ಯಕ್ತಿಗಳಿಗೆ ಶೀತ, ಜ್ವರ, ಕೆಮ್ಮು ಇದ್ದಲ್ಲಿ ಕೂಡಲೇ ಚಿಕಿತ್ಸೆ ಪಡೆಯಬೇಕು
- ತೀವ್ರ ಸೋಂಕು ಉಂಟಾದರೆ ತಕ್ಷಣವೇ ನೇತ್ರ ತಜ್ಞರನ್ನ ಭೇಟಿ ಮಾಡಬೇಕು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T